ಸಂಪುಟ: 4 ಸಂಚಿಕೆ: 100 ಪುಟ: 4 ₹: 4 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Read,Share and Follow - www.belagavivaradi.com

Vol-04 Issue: 100 Saturday, 03, June, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

# ಐದು ಗ್ಯಾರಂಟಿ ಘೋಷಣೆ: ಪ್ರಸಕ್ತ ಹಣಕಾಸು ವರ್ಷದಲ್ಲಿ ಅನುಷ್ಠಾನ

## ಜೂನ್ 11 ರಿಂದ ಮಹಿಳೆಯರಿಗೆ ಉಚಿತ ಪ್ರಯಾಣ | ಜುಲೈ 1 ರಿಂದ ಅನ್ನಭಾಗ್ಯ ಯೋಜನೆ ಜಾರಿ

ಬೆಂಗಳೂರು: ಕಾಂಗ್ರೆಸ್ ಪಕ್ಷ ಚುನಾವಣೆಗೂ ಮುನ್ನಾ ಜನತೆಗೆ ನೀಡಲಾಗಿದ್ದ ಎಲ್ಲಾ ಗ್ಯಾರಂಟಿ ಭರವಸೆಗಳನ್ನು ಪ್ರಸಕ್ತ ಹಣಕಾಸು ವರ್ಷದಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸಚಿವ ಸಂಪುಟ ಸಭೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ,

ಮೊದಲ ಗ್ಯಾರಂಟಿಯಾಗಿ **ಗೃಹ ಜ್ಯೋತಿ ಯೋಜನೆಯನ್ನು ಜುಲೈ 1 ರಿಂದ** ಜಾರಿ ಮಾಡಲಾಗುವುದು ಎಂದರು. 12 ತಿಂಗಳ ಸರಾಸರಿ ಆಧರಿಸಿ, ಅದಕ್ಕೆ ಶೇಕಡಾ 10 ರಷ್ಟು ಸೇರಿಸಿ, ಸಂಪೂರ್ಣ ಶುಲ್ಕ ವಿನಾಯಿತಿ ನೀಡಲಾಗುವುದು,

ಈ ಹಿಂದಿನ ಹಳೇ ವಿದ್ಯುತ್ ಬಾಕಿ–ಯನ್ನು ಗ್ರಾಹಕರೇ ಪಾವತಿಸಬೇಕು.ಜುಲೈ ತಿಂಗಳ ವಿದ್ಯುತ್ ಬಳಕೆಗೆ ಆಗಸ್ಟ್ ನಿಂದ ಅನ್ವಯವಾಗಲಿದೆ. ಬಾಡಿಗೆದಾರರಿಗೂ ಈ ಯೋಜನೆ ಅನ್ವಯವಾಗಲಿದೆ ಎಂದರು. ಯಾವುದೇ ಜಾತಿ, ಧರ್ಮಗಳ ತಾರತಮ್ಯ ಇಲ್ಲದೆ ಗ್ಯಾರಂಟಿ ಯೋಜನೆ



ಜಾರಿ ಎಂದ ಸಿದ್ದರಾಮಯ್ಯ, ಈ ಆರ್ಥಿಕ ವರ್ಷದಲ್ಲಿ ಘೋಷಣೆ ಮಾಡಿರುವ ಎಲ್ಲಾ ಗ್ಯಾರಂಟಿಗಳನ್ನು ಮಾಡುತ್ತೇವೆ ಎಂದು ತಿಳಿಸಿದರು.

**ಎರಡನೇ ಯೋಜನೆ 'ಗೃಹಲಕ್ಷ್ಮಿ'ಯನ್ನು ಆಗಸ್ಟ್ 15 ರಂದು ಅನುಷ್ಠಾನಕ್ಕೆ ತರಲಾಗುವುದು,** ಈ ಯೋಜನೆಯಡಿ ಬಿಪಿಎಲ್ , ಎಪಿಎಲ್ ಖಾತೆದಾರರ ಮನೆ ಯಜಮಾನಿ ಖಾತೆಗೆ ಹಣ ಮಾಡಲಾಗುವುದು, ಆದರೆ, ಯೋಜನೆ ಫಲಾನುಭವಿಗಳು ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ವಿವರ ಸಲ್ಲಿಸಬೇಕು, ಜೂನ್ 15 ರಿಂದ ಜುಲೈ 15ರೊಳಗೆ ಅರ್ಜಿ ಸಲ್ಲಿಸಬೇಕು ಎಂದರು. ಸಾಮಾಜಿಕ ಭದ್ರತೆ ಪಿಂಚಣಿದಾರ–ರಿಗೂ ಈ ಯೋಜನೆ ಅನ್ವಯವಾಗಲಿದೆ ಎಂದರು.

**"ಗೃಹಲಕ್ಷ್ಮೀ 2 ಸಾವಿರ ಹಣ ಪಡೆಯಲು ಅಕೌಂಟ್–ಆಧಾರ್ ಲಿಂಕ್ ಅಗತ್ಯ: ಸಿಎಂ ಸಿದ್ದರಾಮಯ್ಯ**

ಬೆಂಗಳೂರು: ಮನೆಯ ಯಜಮಾನಿಗೆ. ಅವರ ಅಕೌಂಟ್ಗೆ ತಿಂಗಳಿಗೆ 2 ಸಾವಿರ ಜಮಾ ಮಾಡುತ್ತೇವೆ. ಆದ್ದರಿಂದ ಅವರು ಅಕೌಂಟ್ ಕೊಡಬೇಕು, ಆಧಾರ್, ಅಪ್ಲಿಕೇಶನ್ ಕೊಡಬೇಕು. ಆನ್ಲೈನ್ ಮೂಲಕ ಅರ್ಜಿ ಕೊಡಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಗ್ಯಾರಂಟಿ ಯೋಜನೆಯ ಬಗ್ಗೆ ಪತ್ರಿಕಾಗೋಷ್ಠಿ ನಡೆಸಿದ ಅವರು, ಗೃಹಲಕ್ಷ್ಮೀ ಯೋಜನೆಯ ಮೂಲಕ ಬಿಪಿಎಲ್ ಮತ್ತು ಎಪಿಎಲ್ ಯಜಮಾನಿಗೂ ಹಣ ಬರುತ್ತದೆ. ಹೀಗಾಗಿ ಜೂನ್ 15 ರಿಂದ ಜುಲೈ 15ರವರೆಗೆ ಅರ್ಜಿ ಕೊಡಬೇಕು. ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು ಎಂದು ಹೇಳಿದ್ದಾರೆ.

ನಂತರ ಜೂನ್ 15ಕ್ಕೆ ಪ್ರೊಸೆಸ್ ಮಾಡಿ ಬಳಿಕ ಆಗಸ್ಟ್ 15 ಸ್ವಾತಂತ್ರ ದಿನಾಚರಣೆ ದಿನ ಯಜಮಾನಿ ಅಕೌಂಟ್ಗೆ 2 ಸಾವಿರ ರೂಪಾಯಿ ಜಮಾ ಮಾಡುತ್ತೇವೆ. ಅಕೌಂಟ್ ಮಾಡದೆ ಹಣ ಕೊಡಕಾಗುದಿಲ್ಲ, ಆಧಾರ್ ಲಿಂಕ್ ಮಾಡದಿದ್ರೆ ಹಣ ಹಾಕಲಾಗುದಿಲ್ಲ ಎಂದಿದ್ದಾರೆ.

**3ನೇ ಗ್ಯಾರಂಟಿ ಅನ್ನಭಾಗ್ಯ** ಯೋಜನೆಯಡಿ ಜುಲೈ 1 ರಿಂದ ಎಲ್ಲಾ ಬಿಪಿಎಲ್ ಕಾರ್ಡ್ ದಾರರು ಮತ್ತು ಅಂತ್ಯೋದಯ ಫಲಾನುಭವಿಗಳಿಗೆ ತಲಾ 10 ಕೆಜಿ ಅಕ್ಕಿ ನೀಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

**4ನೇ ಗ್ಯಾರಂಟಿ ಶಕ್ತಿ:** ವಿದ್ಯಾರ್ಥಿನಿಯರು ಸೇರಿದಂತೆ ರಾಜ್ಯದಲ್ಲಿನ ಎಲ್ಲಾ ಮಹಿಳೆಯರು ಕೆಎಸ್ ಆರ್ ಟಿಸಿ ಹಾಗೂ ಬಿಎಂಟಿಸಿ ಬಸ್ ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಶಕ್ತಿ ಯೋಜನೆಗೆ ಈ ತಿಂಗಳು 11 ನೇ ತಾರೀಖು ಚಾಲನೆ ನೀಡಲಾಗುವುದು, ಬೆಂಗಳೂ–ರಿನಿಂದ ತಿರುಪತಿ, ಬೆಂಗಳೂರಿನಿಂದ ಹೈದರಾಬಾದ್ಗೆ ಅವಕಾಶ ವಿಲ್ಲ.

ಎಸಿ ಮತ್ತು ಲಕ್ಸುರಿ ಬಸ್ ಹೊರತುಪಡಿಸಿ ಸಾಮಾನ್ಯ ಬಸ್ ಗಳಿಗೆ ಮಾತ್ರ ಅನ್ವಯವಾಗಲಿದೆ.

ಕೆಎಸ್ ಆರ್ ಟಿ ಸಿ ಬಸ್ ನಲ್ಲಿ ಶೇ.50 ರಷ್ಟು ಸೀಟು ಪುರುಷರಿಗೆ ಮೀಸಲು, ಐರಾವತ, ರಾಜಹಂಸ ಸೇರಿ ಎಲ್ಲ ರೀತಿಯ ಲಕ್ಸ್ಯೂರಿ, ಎಸಿ ಮತ್ತು ನಾನ್ ಎಸಿ ಸ್ಲೀಪರ್ ಬಸ್ ಗಳಿಗೆ ಇದು ಅನ್ವಯವಾಗಲ್ಲ ಎಂದು ಮುಖ್ಯಮಂತ್ರಿ ತಿಳಿಸಿದರು. ಉಚಿತ ಬಸ್ ಪ್ರಯಾಣದ ಸವಲತ್ತನ್ನು ತೃತೀಯ ಲಿಂಗಿಗಳಿಗೂ ಒದಗಿಸಲಾಗಿದೆ.

**5ನೇ ಗ್ಯಾರಂಟಿ ಯುವನಿಧಿ:** 2022–23ರಲ್ಲಿ ಪಾಸ್ ಆದ ಪದವೀಧರ ನಿರುದ್ಯೋಗಿಗಳಿಗೆ ನೋಂದಣಿಯಾದ 24 ತಿಂಗಳ ವರಗೆ ಪ್ರತಿ ತಿಂಗಳಿಗೆ 3,000 ಮತ್ತು ಡಿಪ್ಲೋಮಾ ಮಾಡಿದವರಿಗೆ 1, 1500 ಗೌರವ ಧನ ನೀಡಲಾಗುವುದು ಎಂದ ಮುಖ್ಯಮಂತ್ರಿ ತಿಳಿಸಿದರು.

ವೃತ್ತಿಪರ ಶಿಕ್ಷಣ ಸೇರಿದಂತೆ ಎಲ್ಲಾ ಪದವೀಧರ ನಿರುದ್ಯೋಗಿಗಳಿಗೆ ಇದು ಅನ್ವಯವಾಗಲಿದೆ.

ತೃತೀಯ ಲಿಂಗಿಗಳಿಗೂ ಕೂಡಾ ಈ ಯೋಜನೆ ಅನ್ವಯ ನಿರುದ್ಯೋಗ ಭತ್ಯೆ ನೀಡಲಾಗುವುದು, ಇದಕ್ಕಾಗಿ ಅರ್ಜಿ ಕರೆಯಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

## ಗಡಿ ವಿವಾದ ಬಗೆಹರಿಸಲು ಪ್ರಧಾನಿ ಮೋದಿ, ನೇಪಾಳ ಪ್ರಧಾನಿ ಪುಷ್ಪ ಕಮಲ್ ದಹಾಲ್ ಒಪ್ಪಿಗೆ



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಮತ್ತು ಭಾರತ ಪ್ರವಾಸದಲ್ಲಿರುವ ನೇಪಾಳ ಪ್ರಧಾನಿ ಪುಷ್ಪಕಮಲ್ ದಹಾಲ್ 'ಪ್ರಚಂಡ' ಅವರು ಗುರುವಾರ ವ್ಯಾಪಕ ಮಾತುಕತೆಯ ನಂತರ ಸ್ನೇಹದಿಂದ ಗಡಿ ವಿವಾದ ಪರಿಹರಿಸಲು ಒಪ್ಪಿಕೊಂಡಿದ್ದಾರೆ.

ಮುಂದಿನ 10 ವರ್ಷಗಳಲ್ಲಿ ಭಾರತದ ವಿದ್ಯುತ್ ಆಮದನ್ನು 10,000 ಮೆಗಾವ್ಯಾಟ್‌ಗೆ ಹೆಚ್ಚಿಸುವುದು ಸೇರಿದಂತೆ ಹಲವು ಪ್ರಮುಖ ಒಪ್ಪಂದಗಳಿಗೆ ಉಭಯ ನಾಯಕರು ಸಹಿ ಹಾಕಿದ್ದಾರೆ.

ಪ್ರಸ್ತುತ, ಭಾರತ ನೇಪಾಳದಿಂದ ಕೇವಲ 450 ಮೆಗಾವ್ಯಾಟ್ ವಿದ್ಯುತ್ ಅನ್ನು ಮಾತ್ರ ಆಮದು ಮಾಡಿಕೊಳ್ಳುತ್ತಿದೆ. ಭಾರತದ ಗ್ರಿಡ್ ಮೂಲಕ ನೇಪಾಳದಿಂದ ಬಾಂಗ್ಲಾದೇಶಕ್ಕೆ ಮೊದಲ ತ್ರಿಪಕ್ಷೀಯ ವಿದ್ಯುತ್ ವ್ಯಾಪಾರಕ್ಕೂ ಉಭಯ ನಾಯಕರು ಒಪ್ಪಿಗೆ ನೀಡುವ ಮೂಲಕ ಪ್ರಾದೇಶಿಕ ಸಹಕಾರವನ್ನು ಬಲಪಡಿಸಿದ್ದಾರೆ.

ದ್ವಿಪಕ್ಷೀಯ ಮಾತುಕತೆಯ ನಂತರ ಮಾತನಾಡಿದ ಪ್ರಚಂಡ ಅವರು, "ಸ್ಥಾಪಿತ ದ್ವಿಪಕ್ಷೀಯ ರಾಜತಾಂತ್ರಿಕ ಕಾರ್ಯವಿಧಾನದ ಮೂಲಕ ಗಡಿ ವಿವಾದವನ್ನು ಪರಿಹರಿಸಲು ನಾನು ಪ್ರಧಾನಿ ಮೋದಿ ಜಿ ಅವರನ್ನು ಒತ್ತಾಯಿಸುತ್ತೇನೆ.... ಭಾರತವು ತಮ್ಮ ನೆರೆಹೊರೆಯ ಮೊದಲ ನೀತಿಯಂತೆ ನೇಪಾಳದ ಪರವಾಗಿ ನಿಂತಿದೆ ಮತ್ತು ನಾವು ಸಹ ಅದನ್ನೇ ಆಶಿಸುತ್ತೇವೆ. ಗಡಿ ಸಮಸ್ಯೆಯನ್ನು ರಾಜತಾಂತ್ರಿಕವಾಗಿ ಪರಿಹರಿಸಲಾಗುವುದು ಎಂದರು.

2020ರಲ್ಲಿ ನೇಪಾಳವು ಉತ್ತರಾಖಂಡದ ಲಿಂಪಿಯಾಧುರಾ, ಕಾಲಾಪಾನಿ ಮತ್ತು ಲಿಪುಲೇಖ್ ಎಂಬ ಮೂರು ಪ್ರದೇಶಗಳನ್ನು ತಮ್ಮ ಭೂಮಿಯ ಭಾಗವಾಗಿ ತೋರಿಸುವ ಹೊಸ ರಾಜಕೀಯ ನಕ್ಷೆಯನ್ನು ಪ್ರಕಟಿಸಿದ ನಂತರ ಉಭಯ ದೇಶಗಳ ನಡುವಿನ ಸಂಬಂಧ ಹದಗೆಟ್ಟಿತು.

ಭಾರತ ಮತ್ತು ನೇಪಾಳದ ನಡುವೆ ಗಡಿಗಳು ಅಡೆತಡೆಗಳಾಗಬಾರದು ಮತ್ತು ಭವಿಷ್ಯದಲ್ಲಿ ಪಾಲುದಾರಿಕೆ ಸೂಪರ್ಹಿಟ್ ಆಗಬೇಕು ಎಂದು ಪ್ರಧಾನಿ ಮೋದಿ ಪುನರುಚ್ಚರಿಸಿದರು.

ರೈಲು ಸಂಪರ್ಕ, ವಿದ್ಯುತ್ ಖರೀದಿ ಒಪ್ಪಂದಗಳು, ಜಲವಿದ್ಯುತ್ ಶಕ್ತಿ, ಪೆಟ್ರೋಲಿಯಂ ಮೂಲಸೌಕರ್ಯ, ಗಡಿಯಾಚೆಗಿನ ಪಾವತಿ ವ್ಯವಸ್ಥೆಗಳು ಮತ್ತು ವ್ಯಾಪಾರ ಹಾಗೂ ಹೂಡಿಕೆ ಸುಧಾರಿಸುವ ಹಲವು ಒಪ್ಪಂದಗಳಿಗೆ ಭಾರತ ಹಾಗೂ ನೇಪಾಳ ಸಹಿ ಹಾಕಿವೆ.

## ಬಜರಂಗದಳದ ನಿರುದ್ಯೋಗಿಗಳಿಗೂ ಯುವನಿಧಿ ಫ್ರೀ: ಬಿಜೆಪಿ ಕಾಲೆಳೆದ ಕಾಂಗ್ರೆಸ್



ಬೆಂಗಳೂರು: ಮುಖ್ಯ ಮಂತ್ರಿ ಸಿದ್ದರಾಮಯ್ಯ ಇಂದು ಮಹತ್ವದ ಐದು ಗ್ಯಾರಂಟಿಗಳ ಜಾರಿಗೆ ಘೋಷಣೆ ಮಾಡಿದ್ದು, ಬಜರಂಗದಳದ ನಿರುದ್ಯೋಗಿಗಳಿಗೂ ಯುವನಿಧಿ ಫ್ರೀ ಎಂದು ಕಾಂಗ್ರೆಸ್ ಹೇಳುವ ಮೂಲಕ ಬಿಜೆಪಿಯ ಕಾಲೆಳೆದಿದೆ.

ಈ ಕುರಿತು ಟ್ವೀಟ್ ಮಾಡಿರುವ ಕಾಂಗ್ರೆಸ್, ನಾವು ನುಡಿದಂತೆ ನಡೆಯುವವರು, ಮಾತು ಉಳಿಸಿಕೊಳ್ಳುವವರು.

ಐದೂ ಗ್ಯಾರಂಟಿಗಳನ್ನು ಜಾರಿಗೊಳಿಸಿ ಇತಿಹಾಸ ಸೃಷ್ಟಿಸಿದ್ದೇವೆ. ಇದು ನಮ್ಮ ಬದ್ಧತೆ ಎಂದು ಹೇಳಿದೆ.

ನಳಿನ್ ಕುಮಾರ್ ಕಟೀಲ್ ಅವರೇ ನಿಮ್ಮ ಮನೆಗೂ 200 ಯೂನಿಟ್ ವಿದ್ಯುತ್ ಫ್ರೀ, ಬಸವರಾಜ ಬೊಮ್ಮಾಯಿ ಅವರೇ ನಿಮ್ಮ ಮನೆಗೂ ಫ್ರೀ, ಶೋಭಾ ಕರಂದ್ಲಾಜೆ ಅವರೇ ನಿಮಗೂ ಪ್ರಯಾಣ ಫ್ರೀ, ಸಿಟಿ ರವಿ ಅವರೇ ನಿಮ್ಮ ಮನೆಯವರೆಗೂ ರೂ. 2,000 ಫ್ರೀ ಎಂದು ಹೇಳುವ ಮೂಲಕ ಬಿಜೆಪಿ ನಾಯಕರಿಗೆ ಟಾಂಗ್ ನೀಡಲಾಗಿದೆ.

## ರಾಹುಲ್ ಗಾಂಧಿ ಭಾರತದ ಯಾವುದೋ ಶತ್ರು ಶಕ್ತಿಯ ನಾಯಕನಂತೆ ಕಾಣಿಸುತ್ತಿದ್ದಾರೆ, ರಾಜಕೀಯ ನಾಯಕನಂತಲ್ಲ: ರವೀಂದರ್ ರೈನಾ

ಸಂಬಾ/ಜಮ್ಮು: ಜಮ್ಮು ಮತ್ತು ಕಾಶ್ಮೀರದ ಬಿಜೆಪಿ ಅಧ್ಯಕ್ಷ ರವೀಂದರ್ ರೈನಾ ಅವರು ಗುರುವಾರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ್ದು, ಅಮೆ–ರಿಕದಲ್ಲಿನ ಅವರ ಹೇಳಿಕೆಗಳು ಭಾರತದ 'ಶತ್ರುಗಳನ್ನು' ಹೋಲುತ್ತವೆ ಮತ್ತು ಅಲ್ಲಿಂದ ತೆರೆದುಕೊಳ್ಳುವ 'ನಾಟಕ'ಕ್ಕೆ ಅವರು 'ವೆಚ್ಚವನ್ನು' ಭ–ರಿಸಬೇಕಾಗುತ್ತದೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರು ಆರು ದಿನಗಳ ಪ್ರವಾಸ ಕೈಗೊಂಡಿದ್ದು, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರದ ಆಡಳಿತಾರೂಢ ಸರ್ಕಾರವನ್ನು



ಗುರಿಯಾಗಿಟ್ಟುಕೊಂಡು ಅಮೆ–ರಿಕದಲ್ಲಿ ಅವರು ನೀಡಿದ ಹೇಳಿಕೆಗೆ ಬಿಜೆಪಿ ಕಟುವಾಗಿ ಟೀಕಿಸಿದೆ.

ರಾಹುಲ್ ಗಾಂಧಿ ಮಾತನಾಡುವ ರೀತಿ ನೋಡಿದರೆ ಅವರು ಯಾವ ರಾಜಕೀಯ ಪಕ್ಷದ ನಾಯಕರೂ ಅಲ್ಲ. ಅವರು ಭಾರತದ ಯಾವುದೋ ಶತ್ರು ಶಕ್ತಿಯ ನಾಯಕ ಎಂದು ತೋರುತ್ತಿದೆ' ಎಂದು ರೈನಾ ಸಾಂಬಾ ಜಿಲ್ಲೆಯ ವಿಜಯಪುರ ಪ್ರದೇಶದಲ್ಲಿ ಕಾರ್ಯ ಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಅವರು ಸುದ್ದಿಗಾರರಿಗೆ ತಿಳಿಸಿದರು.

ದೇಶದ ಶತ್ರುಗಳು ಮಾತ್ರ ವಿದೇಶಿ ನೆಲದಲ್ಲಿ ಇಂತಹ ಟೀಕೆಗಳನ್ನು ಮಾಡುತ್ತಾರೆ. ಅವರು ದೇಶದ್ರೋಹ ಮತ್ತು ಹಗೆತನವನ್ನು ಸಾಧಿಸುತ್ತಿದ್ದಾರೆ. ಈ ನಾಟಕವನ್ನು ದೇಶ ನೋಡುತ್ತಿದೆ.

ಅವರು ಅದರ ವೆಚ್ಚವನ್ನು ಭ–ರಿಸುತ್ತಾರೆ ಎಂದು ಯುಎಸ್‌ನಲ್ಲಿ ರಾಹುಲ್ ಗಾಂಧಿಯವರ ಹೇಳಿಕೆಗಳ ಕುರಿತು ಸರಣಿ ಪ್ರಶ್ನೆಗಳಿಗೆ ಉತ್ತರಿಸಿದರು.

ತಮ್ಮ ಮೂರು ನಗರಗಳ ಯು–ಎಸ್ ಪ್ರವಾಸದ ಸಮಯದಲ್ಲಿ, ರಾಹುಲ್ ಗಾಂಧಿಯವರು ಆಡಳಿತಾರೂಢ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಸರ್ಕಾರ ಜನರಿಗೆ 'ಬೆದ–ರಿಕೆ' ಮತ್ತು ದೇಶದ ತನಿಖಾ ಸಂಸ್ಥೆಗಳನ್ನು 'ದುರುಪಯೋಗ' ಪಡಿಸಿಕೊಳ್ಳುತ್ತಿದೆ ಎಂದು ಹೇಳಿದರು.

ಭಾರತದಲ್ಲಿ ರಾಜ–ಕೀಯದ ಎಲ್ಲಾ ಸಾಧನಗಳನ್ನು ಬಿಜೆಪಿ ಮತ್ತು ಆರ್‌ಎಸ್‌ಎಸ್ ನಿಯಂತ್ರಿಸುತ್ತಿದೆ. ರಾಜಕೀಯದಲ್ಲಿ ಐತಿಹಾಸಿಕವಾಗಿ ಬಳಸುತ್ತಿದ್ದ ಸಾಮಾನ್ಯ ಸಾಧನಗಳು ಈಗ ಕೆಲಸ ಮಾಡುತ್ತಿಲ್ಲ ಎಂದು ಹೇಳಿದರು.

## ಅಪ್ರಾಪ್ತೆ ಮೇಲೆ ಸಾಮೂಹಿಕ ಅತ್ಯಾಚಾರ




ಪಾಟ್ನಾ: ಬಿಹಾರದ ವೈಶಾಲಿ ಜಿಲ್ಲೆಯಲ್ಲಿ 15 ವರ್ಷದ ಬಾಲಕಿ ಮೇಲೆ ಐವರು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ತನ್ನ ಅಜ್ಜಿಯೊಂದಿಗೆ ವಾಸಿಸುತ್ತಿದ್ದ ಸಂತ್ರಸ್ತೆ ಶೌಚಾಲಯಕ್ಕೆ ಹೋಗಲು ಮನೆಯಿಂದ ಹೊರಬಂದಾಗ ಗುರುವಾರ ತಡರಾತ್ರಿ ಈ ಘಟನೆ ನಡೆದಿದೆ.

ಆರೋಪಿಗಳು ಆಕೆಯನ್ನು ಅಪಹರಿಸಿ ಆಕೆಯ ಮನೆಯಿಂದ ಸುಮಾರು 500 ಮೀಟರ್ ದೂರಕ್ಕೆ ಕರೆದೊಯ್ದು ಅತ್ಯಾಚಾರ ಎಸಗಿದ್ದಾರೆ.

ಕೃತ್ಯ ಎಸಗಿದ ಬಳಿಕ ಆಕೆಯ ಬಾಯಿಗೆ ಬಲವಂತವಾಗಿ ಕೀಟನಾಶಕ ಹಾಕಿದ್ದಾರೆ. ಮನೆಗೆ ಹಿಂತಿರುಗಿದ ನಂತರ, ಬಾಲಕಿ ತನ್ನ ಅಜ್ಜಿಯ ಬಳಿ ಕೃತ್ಯವನ್ನು ವಿವರಿಸಿದ್ದಾಳೆ.

ಶೌಚಾಲಯಕ್ಕೆ ತೆರಳಲು ಬಾಲಕಿ ನನ್ನನ್ನು ಎಬ್ಬಿಸಲಿಲ್ಲ. ಈ ವೇಳೆ ಆರೋಪಿಗಳು ಆಕೆಯನ್ನು ಅಪಹರಿಸಿ ಮನೆಯಿಂದ ಕೆಲವೇ ಮೀಟರ್ ದೂರದಲ್ಲಿ ಅಮಾನುಷವಾಗಿ ದೌರ್ಜನ್ಯ ಎಸಗಿದ್ದಾರೆ. ಆರೋಪಿಗಳು ಆಕೆಯ ಫೋನ್ ಅನ್ನು ಸಹ ಕಿತ್ತುಕೊಂಡಿದ್ದಾರೆ.

ಮನೆಗೆ ಹಿಂದಿರುಗಿದಾಗ ಆಕೆ ಘಟನೆಯನ್ನು ವಿವರಿಸಿದಳು ಮತ್ತು ಆಕೆಯ ತಂದೆಗೆ ವಿಷಯ ತಿಳಿಸಲು ಹೇಳಿದಳು' ಎಂದು ಬಾಲಕಿಯ ಅಜ್ಜಿ ತಿಳಿಸಿದ್ದಾರೆ.

ಸಂತ್ರಸ್ತೆಯ ಪೋಷಕರು ಪಾಟ್ನಾದಲ್ಲಿ ಕಾವಲುಗಾರರಾಗಿ ಕೆಲಸ ಮಾಡುತ್ತಿದ್ದಾರೆ ಮತ್ತು ಘಟನೆಯ ಸಮಯದಲ್ಲಿ ದೂರವಿದ್ದರು. ಮಾಹಿತಿ ಪಡೆದ ತಕ್ಷಣ ಮನೆಗೆ ಧಾವಿಸಿದರು.

ಸಂತ್ರಸ್ತೆಯನ್ನು ಮಹುವಾ ಉಪವಿಭಾಗೀಯ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಆಕೆಯ ಸ್ಥಿತಿ ಗಂಭೀರವಾಗಿದೆ. ಹೀಗಾಗಿ, ವೈದ್ಯರು ಹಾಜಿಪುರದ ಸದರ್ ಆಸ್ಪತ್ರೆಗೆ ರವಾನಿಸಿದ್ದಾರೆ.

## ಅಮಿತ್ ಶಾ ಎಚ್ಚರಿಕೆ: 140ಕ್ಕೂ ಹೆಚ್ಚು ಕದ್ದ ಶಸ್ತ್ರಾಸ್ತ್ರಗಳ ಶರಣಾಗತಿ

ಕೇಂದ್ರ ಗೃಹ ಸಚಿವ ಅಮಿತ್ ಶಾ ಎಚ್ಚರಿಕೆ ಪರಿಣಾಮವು ಒಂದು ದಿನದ ನಂತರ ಗೋಚ–ರಿಸುತ್ತಿದ್ದು ಇಂದು ಮಣಿಪುರದ ವಿವಿಧೆಡೆ 140ಕ್ಕೂ ಹೆಚ್ಚು ಕದ್ದೊಯ್ದಿದ್ದ ಶಸ್ತ್ರಾಸ್ತ್ರಗಳನ್ನು ಶರಣಾಗಿಸಲಾಗಿದೆ ಎಂದು ಮಣಿಪುರದ ಭದ್ರತಾ ಸಲಹೆಗಾರ ಕುಲದೀಪ್ ಸಿಂಗ್ ತಿಳಿಸಿದ್ದಾರೆ.

ಮಾಹಿತಿಯ ಪ್ರಕಾರ, ಶಸ್ತ್ರಾಸ್ತ್ರಗಳಲ್ಲಿ ಸ್ವಯಂ–ಲೋಡಿಂಗ್ ರೈಫಲ್‌ಗಳು, ಕಾರ್ಬೈನ್‌ಗಳು, ಎಕೆ ಮತ್ತು ಐಎನ್‌ಎಸ್‌ಎಎಸ್ ರೈಫಲ್‌ಗಳು, ಲೈಟ್ ಮೆಷಿನ್ ಗನ್‌ಗಳು, ಪಿಸ್ತೂಲ್‌ಗಳು, ಎಂ–16 ರೈಫಲ್‌ಗಳು, ಸ್ಮೋಕ್ ಗನ್‌ಗಳು/ಟಿಯರ್ ಗ್ಯಾಸ್, ಸ್ಟೆನ್ ಗನ್‌ಗಳು ಮತ್ತು ಗ್ರೆನೇಡ್ ಲಾಂಚರ್‌ಗಳು ಸೇರಿವೆ. ಮಣಿಪುರಕ್ಕೆ ತಮ್ಮ ಭೇಟಿಯ ಕೊನೆಯ ದಿನವಾದ ಗುರುವಾರ, ಶಾ ಜನರು ಕದ್ದಿದ್ದ ಶಸ್ತ್ರಾಸ್ತ್ರಗಳನ್ನು ಭದ್ರತಾ ಪಡೆಗಳು ಮತ್ತು ಆಡಳಿತಕ್ಕೆ ಹಸ್ತಾಂತರಿಸುವಂತೆ ಮನವಿ ಮಾಡಿದರು.



ಭಾರತೀಯ ಸೇನೆ ಮತ್ತು ಅಸ್ಸಾಂ ರೈಫಲ್ಸ್‌ನ 10,000 ಸೈನಿಕರು ಈಶಾನ್ಯ ರಾಜ್ಯದಲ್ಲಿ ಸಹಜ ಸ್ಥಿತಿಗೆ ಮರಳಲು ಪ್ರಯತ್ನಿಸುತ್ತಿದ್ದಾರೆ. ಇದಲ್ಲದೇ ಇತರ ಅರೆಸೇನಾ ಪಡೆಗಳ ಯೋಧರನ್ನೂ ನಿಯೋಜಿಸಲಾಗಿದೆ.

ಆದರೆ, ರಾಜ್ಯದಲ್ಲಿ ಶೀಘ್ರವೇ ಶೋಧ ಕಾರ್ಯ ಆರಂಭಿಸಲಾಗುವುದು ಎಂದು ಎಚ್ಚ–ರಿಕೆ ನೀಡಿದರು. ಯಾರಿಗಾದರೂ ಆಯುಧ ಪತ್ತೆಯಾದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಮಣಿಪುರದ ಬಹುತೇಕ ಜಿಲ್ಲೆಗಳಲ್ಲಿ ಪರಿಸ್ಥಿತಿ ಶಾಂತಿಯುತವಾಗಿದೆ ಎಂದು ಶಾ ಹೇಳಿದ್ದರು. ಹಿಂಸಾಚಾರವನ್ನು ತಡೆಯಲು ಹಲವು ಭದ್ರತಾ ಏಜೆನ್ಸಿಗಳು ತಮ್ಮ ಅತ್ಯುತ್ತಮ ಪ್ರಯತ್ನ ಮಾಡುತ್ತಿರುವುದ–ರಿಂದ ದುಷ್ಕರ್ಮಿಗಳು ಗುಂಡಿನ ದಾಳಿ ಅಥವಾ ಖಾಲಿ ಮನೆಗಳಿಗೆ ಬೆಂಕಿ ಹಚ್ಚುವ ಅಪರೂಪದ ಘಟನೆಗಳು ಕಂಡುಬರುತ್ತಿವೆ.

ಮಣಿಪುರ ಹಿಂಸಾಚಾರದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಸರ್ಕಾರ ದೊಡ್ಡ ಘೋಷಣೆ ಮಾಡಿದೆ. ಈ ವೇಳೆ ಕೇಂದ್ರ ಮತ್ತು ಮಣಿಪುರ ಸರ್ಕಾರಗಳು ತಲಾ 10 ಲಕ್ಷ ರೂಪಾಯಿ ಹಾಗೂ ಸಂತ್ರಸ್ತ ಕುಟುಂಬದವ–ರಿಗೆ ಸರ್ಕಾರಿ ಉದ್ಯೋಗ ನೀಡುವುದಾಗಿ ಅಮಿತ್ ಶಾ ಹಾಗೂ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್ ನಡುವೆ ಸೋಮವಾರ ನಡೆದ ಸಭೆಯ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

## ಶಾಲಾ ಕಾಲೇಜುಗಳಲ್ಲಿ ಪ್ರತಿದಿನ ಸಂವಿಧಾನದ ಪೀಠಿಕೆ ಓದುವುದು ಕಡ್ಡಾಯ



ಬೆಂಗಳೂರು: ರಾಜ್ಯದ ಶಾಲೆ, ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದನ್ನು ರಾಜ್ಯ ಸರ್ಕಾರ ಕಡ್ಡಾಯ ಮಾಡಲು ಮುಂದಾಗಿದೆ.

ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಈ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಸಂವಿಧಾನದ ಪ್ರಸ್ತಾವನೆಯನ್ನು ಓದುವ ಮೂಲಕ ಎಲ್ಲರೂ ಸಂವಿಧಾನ ತೋರಿದ ಮಾರ್ಗದಲ್ಲಿ ಕೆಲಸ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯದ ಎಲ್ಲಾ ಶಾಲೆ ಕಾಲೇಜು ಮತ್ತು ವಿಶ್ವವಿದ್ಯಾಲಯದಲ್ಲಿ ಪ್ರತಿದಿನ ಸಂವಿಧಾನದ ಪ್ರಸ್ತಾವನೆಯನ್ನು ವಿದ್ಯಾರ್ಥಿಗಳಿಂದ ಹೇಳಿಸುವುದಕ್ಕೆ ಪೂರಕವಾಗಿ ಆದೇಶ ಹೊರಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಹಾಲಿನ ಪ್ರೋತ್ಸಾಹ ಧನ ಪ್ರತಿ ಲೀಟರ್ಗೆ 1.50 ರೂ. ಕಡಿತ



ಬೆಂಗಳೂರು: ಬೆಂಗಳೂರು ಜಿಲ್ಲಾ ಸಹಕಾರ ಹಾಲು ಒಕ್ಕೂಟ ರೈತರಿಗೆ ಶಾಕ್ ನೀಡಿದ್ದು, ಹಾಲಿನ ಪ್ರೋತ್ಸಾಹ ಧನ ಲೀಟರ್ಗೆ 1.50 ರೂ. ಕಡಿತಗೊಳಿಸಿ ಆದೇಶ ಹೊರಡಿಸಿದೆ.

ಈ ಹಿಂದೆ ಬೆಂಗಳೂರು ಜಿಲ್ಲಾ ಹಾಲು ಒಕ್ಕೂಟ ಬೇಸಿಗೆ ಸಮಯದಲ್ಲಿ ಏಪ್ರಿಲ್ 1 ರಿಂದ ಮೇ 31ರ ವರೆಗೆ ಪ್ರತಿ ಲೀಟರ್ ಹಾಲಿಗೆ 2.85 ರೂ. ವಿಶೇಷ ಪ್ರೋತ್ಸಾಹ ಧನ ಘೋಷಿಸಿತ್ತು. ಇದೀಗ ಪ್ರೋತ್ಸಾಹ ಧನವನ್ನು ಪ್ರತಿ ಲೀಟರ್ ಹಾಲಿಗೆ 1.50 ರೂಪಾಯಿ ಕಡಿತಗೊಳಿಸಿ ಆದೇಶಿಸಿದೆ.

ಸದ್ಯ, ಉತ್ತಮ ಮಳೆಯಾಗಿ ಹಸಿರು ಮೇವಿನ ಲಭ್ಯತೆ ಜಾಸ್ತಿಯಾಗಿದ್ದು, ಹಾಲು ಉತ್ಪಾದನೆ ಹೆಚ್ಚಾಗುತ್ತಿದೆ. ಏಪ್ರಿಲ್ ತಿಂಗಳ ಆರಂಭದಲ್ಲಿ ಪ್ರತಿದಿನ 13.50 ಲಕ್ಷ ಲೀಟರ್ ಉತ್ಪಾದನೆಯಾಗುತ್ತಿದ್ದ ಹಾಲು, ಈಗ 16 ಲಕ್ಷ ಲೀಟರ್ಗೆ ಉತ್ಪಾದನೆಯಾಗುತ್ತಿದೆ.

ದಿನಕ್ಕೆ ಸುಮಾರು 2.50 ಲಕ್ಷ ಲೀಟರ್ ಹಾಲು ಉತ್ಪಾದನೆ ಹೆಚ್ಚಳವಾಗಿದ್ದು, ಹಾಗಾಗಿ ಪ್ರೋತ್ಸಾಹ ಧನ ಕಡಿತಗೊಳಿಸಿ ಆದೇಶ ಹೊರಡಿಸಿದೆ.

## ರಾಜ್ಯದಲ್ಲಿ ಶಾಂತಿ ಕದಡಿದರೆ ಮಾತ್ರ ಬಜರಂಗ ದಳ ನಿಷೇಧಿಸುತ್ತೇವೆ: ಗೃಹ ಸಚಿವ ಜಿ. ಪರಮೇಶ್ವರ

ಬೆಂಗಳೂರು: ಸಂಘಟನೆಯು ಕಾನೂನನ್ನು ಕೈಗೆತ್ತಿಕೊಂಡರೆ ಮಾತ್ರ ಕಾಂಗ್ರೆಸ್ ಸರ್ಕಾರ ಬಜರಂಗದಳವನ್ನು ನಿಷೇಧಿಸುವತ್ತ ಸಾಗುತ್ತದೆ ಎಂದು ಕರ್ನಾಟಕ ಗೃಹ ಸಚಿವ ಜಿ. ಪರಮೇಶ್ವರ ಅವರು ಗುರುವಾರ ಹೇಳಿದ್ದಾರೆ.

ಪರಮೇಶ್ವರ ಅವರು ವಿಧಾನಸೌಧದ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದರು.

ಪರಮೇಶ್ವರ ನೇತೃತ್ವದ ಸಮಿತಿ ಸಿದ್ಧಪಡಿಸಿರುವ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಬಜರಂಗ ದಳ ನಿಷೇಧದ ಪ್ರಸ್ತಾಪವಿದೆ. ಇದು ಬಿಜೆಪಿಯನ್ನು ಕೆರಳಿಸಿತು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ರಾಜಕೀಯ ರ್ಯಾಲಿಗಳಲ್ಲಿ 'ಜೈ ಭಜರಂಗಬಲಿ' ಎಂಬ ಘೋಷಣೆ ಕೂಗಲು ಪ್ರೇರೇಪಿಸಿತು. ಆದರೆ, ಕಾಂಗ್ರೆಸ್ ಗೆಲುವಿಗೆ ಇದು ಅಡ್ಡಿಯಾಗಲಿಲ್ಲ.

ಶಾಂತಿ ಕದಡಿದರೆ ಮಾತ್ರ ಬಜರಂಗ ದಳವನ್ನು ನಿಷೇಧಿಸಲಾಗುವುದು ಎಂದು ನಾವು ಹೇಳಿದ್ದೇವೆ' ಎಂದು ವಿಶ್ವ ಹಿಂದೂ ಪರಿಷತ್ತಿನ ಯುವ ಘಟಕವಾದ ಬಜರಂಗ ದಳವನ್ನು ನಿಷೇಧಿಸುವ ಪ್ರಣಾಳಿಕೆಯ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪರಮೇಶ್ವರ ಉತ್ತರಿಸಿದರು.

ಯಾರೇ ಶಾಂತಿ ಕದಡಿದರೂ ನಿಷೇಧ ಸೇರಿದಂತೆ ಕಠಿಣ ಕ್ರಮ ಎದು–ರಿಸಬೇಕಾಗುತ್ತದೆ. ಶಾಂತಿಯನ್ನು ಭಂಗಗೊಳಿಸದಿದ್ದರೆ ಮತ್ತು ಆಕ್ರಮಣಗಳನ್ನು ನಡೆಸದಿದ್ದರೆ, ಯಾವುದೇ ನಿಷೇಧ ಇರುವುದಿಲ್ಲ. ಕಾರಣವಿಲ್ಲದೆ ನಾವೇಕೆ ನಿಷೇಧಿಸುತ್ತೇವೆ? ಅಂತಹ ಪರಿಸ್ಥಿತಿ ಉದ್ಭವಿಸುವುದಿಲ್ಲ ಎಂದು ನಾನು ಭಾವಿಸುತ್ತೇನೆ. ಒಂದು ವೇಳೆ ಮಾಡುವುದಾದರೆ ನಾವು ಅದಕ್ಕೆ ತಕ್ಕ ಪ್ರತಿಕ್ರಿಯೆ ನೀಡುತ್ತೇವೆ' ಎಂದು



ಹೇಳಿದರು.

ನೈತಿಕ ಪೊಲೀಸ್‌ಗಿರಿ ಮತ್ತು ಕೋಮುವಾದಿ ಚಟುವಟಿಕೆಗಳನ್ನು ಕಾಂಗ್ರೆಸ್ ಸರ್ಕಾರ ಸಹಿಸುವುದಿಲ್ಲ. ಅಂತಹವರ ವಿರುದ್ಧ ಕಾನೂನಿನ ಪ್ರಕಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುತ್ತೇವೆ ಎಂದರು.

ಪೊಲೀಸ್ ಇಲಾಖೆ ಶಿಸ್ತಿನ ಪಡೆಯಾಗಿದೆ. ಶಾಂತಿ ಕದಡುವವರಿಗೆ ಗಾರ್ಡ್ ಆಫ್ ಹಾನರ್, ಸೆಲ್ಯೂಟ್, ಬೆತ್ತ ಮತ್ತು ಬುಲೆಟ್‌ನಿಂದ ಹೊಡೆಯುವುದು ಸಿಗುತ್ತದೆ. ಅದು ಬುಲೆಟ್ ಅಥವಾ ಬೆತ್ತದಿಂದ ಹೊಡೆಯುವುದೇ ಎಂಬ ಬಗ್ಗೆ ಜನರು ತಮಗೆ ಬೇಕಾದುದನ್ನು ಆರಿಸಿಕೊಳ್ಳಬಹುದು. ಕರ್ನಾಟಕವನ್ನು ಸರ್ವಜನಾಂಗದ ಶಾಂತಿಯ ತೋಟವನ್ನಾಗಿ ಮಾಡಲು ಕಾಂಗ್ರೆಸ್ ಸರ್ಕಾರ ಬಯಸಿದೆ ಎಂದು ಪರಮೇಶ್ವರ ಹೇಳಿದರು.

ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿಎಸ್‌ಐ) ನೇಮಕಾತಿ ಹಗರಣದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರ ಮುಂದಿನ ಹಾದಿಯನ್ನು ಚರ್ಚಿಸುತ್ತಿದೆ. ಈ ವಿಷಯವು ಹೈಕೋರ್ಟ್‌ನಲ್ಲಿದೆ. ನಾನು ಹಿರಿಯ ಅಧಿಕಾರಿಗಳು ಮತ್ತು ಅಡ್ವೊಕೇಟ್ ಜನರಲ್ ಅವರೊಂದಿಗೆ ಚರ್ಚಿಸಿದ್ದೇನೆ. ನಾವು ಶೀಘ್ರದಲ್ಲೇ ಸಮಸ್ಯೆಯನ್ನು ಪರಿಹರಿಸುತ್ತೇವೆ. ಯಾ–ರಿಗೂ ಅನ್ಯಾಯವಾಗದಂತೆ ನಾವು ನೋಡಿಕೊಳ್ಳುತ್ತೇವೆ. ಭ್ರಷ್ಟಾಚಾರದಲ್ಲಿ ನೇರವಾಗಿ ಅಥವಾ ಪರೋಕ್ಷವಾಗಿ ಯಾರೇ ಭಾಗಿಯಾಗಿದ್ದರೂ ಕ್ರಮ ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದರು.

ನಾಗರಿಕರಿಗೆ ನೀಡಿರುವ ಭರವಸೆಗಳ ಬಗ್ಗೆ ಕಾಂಗ್ರೆಸ್ ನಾಗರಿಕರಿಗೆ ಅರಿವಿದೆ. ನಾವು ಮಹಿಳೆಯರಿಗೆ 2,000 ರೂ ನೀಡುತ್ತೇವೆ ಎಂದು ಹೇಳಿದಾಗ, ನಾವು ಏನು ಮಾಡುತ್ತಿದ್ದೇವೆಂದು ನಮಗೆ ತಿಳಿದಿತ್ತು. 400 ರೂ. ಸಿಲಿಂಡರ್ ರೂ. 1,200 ಆಗಿದೆ. ಸೊಪ್ಪು 60 ರೂ.ನಿಂದ 180 ರೂ.ಗೆ ಮತ್ತು ಅಡುಗೆ ಎಣ್ಣೆ ರೂ. 80 ರಿಂದ ರೂ. 200 ಆಗಿದೆ. ನಾವು ಇದನ್ನು ಎದುರಿಸಲು ಮಹಿಳೆಯರನ್ನು ಸಬಲೀಕರಣಗೊಳಿಸಲು ಬಯಸಿದ್ದೇವೆ. ಎಲ್ಲಾ ಐದು ಖಾತರಿಗಳನ್ನು ಜಾ–ರಿಗೊಳಿಸಲಾಗುವುದು ಎಂದು ಅವರು ತಿಳಿಸಿದರು.

# 6 ದಿನಗಳಲ್ಲಿ ಮದ್ವೆಯಾಗಬೇಕಿದ್ದ ಯುವಕನ ಕೊಲೆಗೈದ ದುಷ್ಕರ್ಮಿಗಳು




ಹುಬ್ಬಳ್ಳಿ: ಇನ್ನೂ 6 ದಿನಗಳಲ್ಲಿ ಹಸೆ ಮಣೆ ಏರಬೇಕಿದ್ದ ಯುವಕ ಭೀಕರವಾಗಿ ಕೊಲೆಯಾಗಿ ಮಸಣ–ಕ್ಕೆ ಸೇರಿದ ಘಟನೆ ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕಿನ ಜಿನ್ನೂರ ಗ್ರಾಮದಲ್ಲಿ ನಡೆದಿದೆ.

ಯುವಕ ನಿಂಗಪ್ಪ ಬೂದಪ್ಪ ನವಲೂರ (28) ಕೊಲೆಯಾಗಿದ್ದಾನೆ. ಮೃತ ಯುವಕನಿಗೆ ಜೂನ್ 7 ರಂದು ತಾವರಗೇರೆ ಗ್ರಾಮದ ಯುವತಿ ಜೊತೆ ಮದುವೆನಿಶ್ಚಿಯವಾಗಿತ್ತು. ನಿಂಗಪ್ಪ ತೋಟದ ಮನೆಯಲ್ಲಿದ್ದಾಗ ಮಧ್ಯರಾತ್ರಿ ದಾಳಿ ಮಾಡಿದ ದುಷ್ಕರ್ಮಿಗಳು ಕಾರದ ಕಣ್ಣಿಗೆ ಕಾರದ ಪುಡಿ ಎರಚಿ, ಕತ್ತು ಹಿಸುಕಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ಕೊಲೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ, ಸ್ಥಳಕ್ಕೆ ಕಲಘಟಗಿ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಕೆರೆಯಲ್ಲಿ ಮುಳುಗಿ ಇಬ್ಬರು ಸಾವು



ರಾಯಚೂರು: ಕುಡಿಯಲು ನೀರು ತರಲು ಹೋಗಿ ಕೆರೆಯಲ್ಲಿ ಮುಳುಗಿ ಚಿಕ್ಕಪ್ಪ ಹಾಗೂ ಮಗ ಸಾವನ್ನಪ್ಪಿರುವ ಘಟನೆ ರಾಯಚೂರು ತಾಲೂಕಿನ ಕೊರ್ತಕುಂದಾ ಗ್ರಾಮದ ಹೊರವಲಯದಲ್ಲಿ ನಡೆದಿದೆ.

ಚಿಕ್ಕಪ್ಪ ಸಲೀಂ ಹುಸೇನಸಾಬ್ (32) ಹಾಗೂ ಅಣ್ಣನ ಮಗ ಯಾಸೀನ್ ರಫಿ (13) ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ನರೇಗಾ ಕೆಲಸಕ್ಕೆ ಚಿಕ್ಕಪ್ಪನ ಜೊತೆಯಲ್ಲಿ ಹೋಗಿದ್ದ ಬಾಲಕ ಕೆರೆಯಲ್ಲಿ ಕುಡಿಯಲು ನೀರು ತುಂಬಿಕೊಂಡು ಬರಲು ಹೋಗಿದ್ದಾಗ ಕಾಲು ಜಾರಿ ಬಿದ್ದಿದ್ದಾನೆ. ಬಾಲಕನ ಚೀರಾಟ ಕೇಳಿ ರಕ್ಷಣೆಗೆ ಹೋದ ಚಿಕ್ಕಪ್ಪನೂ ಕೆರೆಯಲ್ಲಿ ಮುಳಗಿ ಸಾವನ್ನಪ್ಪಿದ್ದಾರೆ. ಯಾಪಲದಿನ್ನಿ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಾಗಿದೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ.

# ಬೆಳಗಾವಿ ಸೇರಿದಂತೆ ರಾಜ್ಯದ 4 ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ

ಬೆಂಗಳೂರು: ರಾಜ್ಯದ 4 ಜಿಲ್ಲೆಗಳಲ್ಲಿ ಮುಂದಿನ 24 ಗಂಟೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಜೂ.4ರಂದು ನೈಋತ್ಯ ಮಾನ್ಸೂನ್ ಕೇರಳ ಪ್ರವೇಶಿಸುವ ಸೂಚನೆ ಹಿನ್ನೆಲೆ ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗದಲ್ಲಿ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ಯಾದಗಿರಿ, ಬಳ್ಳಾರಿ, ಚಿಕ್ಕಬಳ್ಳಾಪುರ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು, ವಿಜಯನಗರ ಜಿಲ್ಲೆಯಲ್ಲಿ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ.

## ಸಚಿವ ಸತೀಶ್ ಜಾರಕಿಹೊಳಿ

»ರಿಯ ಸಹೋದರಿ ನಿಧನ



ಗೋಕಾಕ: ಕೆಪಿಸಿಸಿ ಕಾರ್ಯಾಧ್ಯಕ್ಷ, ಸಚಿವ ಸತೀಶ್ ಜಾರಕಿಹೊಳಿಯವರ ಹಿರಿಯ ಸಹೋದರಿ, ಗೋಕಾಕ ನಗರಸಭೆ ಮಾಜಿ ಅಧ್ಯಕ್ಷೆ ಲಗಮವ್ವಾ ನಿಂಗಪ್ಪಾ ಸುಲಧಾಳ (67) ಹೃದಯಾಘಾತದಿಂದ ಶುಕ್ರವಾರ ಬೆಳಗ್ಗೆ 8:00 ಗಂಟೆಗೆ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಪತಿ, ಇಬ್ಬರು ಪುತ್ರರು, ಓರ್ವ ಸುಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತ ಲಗಮವ್ವಾ ನಿಂಗಪ್ಪಾ ಸುಲಧಾಳ ಅವರು ಗೋಕಾಕ ನಗರಸಭೆ ಉಪಾಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಮೃತರ ಅಂತ್ಯಕ್ರಿಯೆ ನಗರದ ಕುಂಬಾರ ಗಲ್ಲಿಯ ರುದ್ರಭೂಮಿಯಲ್ಲಿ ಮಧ್ಯಾಹ್ನ 12 ಗಂಟೆಗೆ ನಡೆಯಲಿದೆ ಎಂದು ಮೃತರ ಕುಟುಂಬಸ್ಥರು ತಿಳಿಸಿದ್ದಾರೆ. ಈ ಕುರಿತು ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ ಅವರು, ಮಾತೃಹೃದಯದ ಸಹೋದರಿ ಲಗಮವ್ವಾಯವರು ಸರಳತೆ ಹಾಗೂ ಸೌಜನ್ಯತೆಯ ಆಗರವಾಗಿದ್ದರು. ಬಾಲ್ಯದಿಂದಲೂ ನಮಗೆಲ್ಲ ಪ್ರೇರೇಪಿಸಿ ಪ್ರೋತ್ಸಾಹಿಸಿ ಬೆಳೆಸಿದ್ದರು. ಅವರ ಮಾರ್ಗದರ್ಶನವು ನನ್ನ ಬೆಳವಣಿಗೆಯಲ್ಲಿ ಪ್ರಧಾನ ಪಾತ್ರವಹಿಸಿತ್ತು. ನನ್ನ ತಾಯಿ ಸ್ವರೂಪಳಾಗಿದ್ದ ಸಹೋದರಿಯನ್ನು ಕಳೆದುಕೊಂಡು ತೀವ್ರ ಆಘಾತವನ್ನುಂಟುಮಾಡಿದೆ. ಭಗವಂತನು ಅವರ ಪವಿತ್ರ ಆತ್ಮಕ್ಕೆ ಶಾಂತಿಯನ್ನು ನೀಡಲೆಂದು ದುಃಖ ವ್ಯಕ್ತಪಡಿಸಿದ್ದಾರೆ.

# ಚಿಮ್ಮಡದಲ್ಲಿ ಭೀಕತ ಮಳೆ ಗಾಳಿಗೆ ಅಪಾರ ಹಾನಿ

## ತಹಶೀಲ್ದಾರಡಾ. ದೊಡ್ಡಪ್ಪ ಹೂಗಾರ ಹಲವು ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ



**ಚಿಮ್ಮಡ;** ಗುರುವಾರ ಸಂಜೆ ಬೀಸಿದ ಭೀಕರ ಬಿರುಗಾಳಿ ಮಳೆಯಿಂದ ಈ ಭಾಗದ ರೈತರಿಗೆ ಲಕ್ಷಾಂತರ ರೂ ಬೆಳೆಹಾನಿ ಯಾಗಿದ್ದಲ್ಲದೇ ಪತ್ರಾಸ್ ಮನೆಗಳು ದನದ ಸೆಡ್ಡುಗಳು. ಬ್ರಹತ್ ಮರಗಳು ಹಾಗೂ ವಿದ್ಯುತ್ ಕಂಬಗಳು ಧರೆಗುರುಳಿದ ಪರಿಣಾಮ 20 ಘಂಟೆಗಳ ಕಾಲ ಗ್ರಾಮದಲ್ಲಿ ವಿದ್ಯುತ್ ಸ್ಥಗಿತಗೊಂಡು ಪರದಾಡುವ ಸ್ಥಿತಿ ನಿರ್ಮಾಣಗೊಂಡಿದೆ.

ಗುರುವಾರ ಸಂಜೆ 6.30 ರಿಂದ 7.30 ಘಂ.ವರೆಗೆ ಬೀಸಿದ ಭಯಂಕರ ಬಿರುಗಾಳಿ ಆಲಿಕಲ್ಲು ಮಳೆಯಿಂದಾಗಿ ಗ್ರಾಮದ ಸರಹದ್ದಿನಲ್ಲಿ 20ಕ್ಕೂ ಹೆಚ್ಚು ಬ್ರಹತ್ ಮರಗಳು ಮನೆ ಹಾಗೂ ಪತ್ರಾಸ್ ಸೆಡ್‌ಗಳ ಮೇಲೆ ಉರುಳಿದ ಪರಿಣಾಮ ದನದ ಸೆಡ್ಡುಗಳು ನುಜ್ಜು ಗುಜ್ಜಾಗಿದೆ. ಅಲ್ಲದೇ ಗ್ರಾಮದ ಸರಹದ್ದಿನಲ್ಲಿ 50ಕ್ಕೂ ಹೆಚ್ಚು ವಿದ್ಯುತ್ ಕಂಬಗಳು, ಮೂರು ಟ್ರಾನ್ಸಫಾರ್ಮರ್‌ಗಳು (ಟಿಸಿ) ನೆಲಕ್ಕುರುಳಿದ ಪರಿಣಾಮ ಇಡೀ ರಾತ್ರಿ ಹಗಲು ವಿದ್ಯುತ್ ಸಂಪರ್ಕ ಕಡಿತಗೊಂಡಿತ್ತು, ಸೊಳ್ಳೆಗಳ ಕಾಟದಿದಾಗಿ ರಾತ್ರಿಯಿಡೀ ಗ್ರಾಮಸ್ಥರು ಜಾಗರಣೆ ಮಾಡುವಂತಾಯಿತು, ಗ್ರಾಮದ ಮಾರ್ಗವಾಗಿ ಸಂಚರಿಸುವ ರಸ್ತೆಗಳಲ್ಲಿ ಹತ್ತಾರು ಮರಗಳು ಧರೆಗುರುಳಿದ ಪರಿಣಾಮ ಸುಮಾರು ಎರಡು ಘಂಟೆಗಳ ಕಾಲ ರಸ್ತೆ ಸಂಚಾರವೆ ಅಸ್ತವೆಸ್ತಗೊಂಡಿತ್ತು. ಹೆಸ್ಕಾಂ ಸಿಬ್ಬಂದಿ ಹಾಗೂ ಅರಣ್ಯಾಧಿಕಾರಿಗಳು ಗ್ರಾಮಸ್ಥರ ನೆರವಿನೊಂದಿಗೆ ಮರಗಳನ್ನು ಕತ್ತರಿಸಿ ರಸ್ತೆ ತೆರವುಗೊಳಿಸಿ ಸಂಚಾರ ಸುಗಮ ಗೊಳಿಸಿದರು.

ಈ ಬಿರುಗಾಳಿ ಮಳೆಯಿಂದಾಗಿ ಕೆಲವು ಮನೆ, ಆಲೆಮನೆಗಳ ಪತ್ರಾಸಗಳು ಹಾರಿ ಹೋಗಿವೆ, ಅಲ್ಲದೇ ಹತ್ತಾರು ಬ್ರಹತ್ ಮರಗಳು ಬೇರು ಸಮೇತ ನೆಲಕ್ಕುರುಳಿವೆ, ಕಬ್ಬು, ಗೋವಿನಜೋಳದ ಬೆಳೆ ನೆಲಕ್ಕುರುಳಿದೆ ಇದರಿಂದ ರೈತರಿಗೆ ಲಕ್ಷಾಂತರ ರೂ.ಗಳ ಹಾನಿಯಾಗಿದೆ. ಮೊದಲೇ ಬೆಳೆದ ಬೆಳೆಗೆ ಸಮರ್ಪಕ ಬೆಲೆಯಿಲ್ಲದೆ ಕಂಗಾಲಾಗಿದ್ದ ರೈತರಿಗೆ ಈ ಅಕಾಲಿಕ ಮಳೆ, ಗಾಳಿಯಿಂದಾಗಿ ಗಾಯದ ಮೇಲೆ ಬರೆಯೆಳೆದಂತಾಗಿದೆ. ತಹಶೀಲ್ದಾರ ಡಾ; ದೊಡ್ಡಪ್ಪ ಹೂಗಾರ ಹಲವು ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಭಿಯಂತರ ಆರ್.ಎ. ಅಂಬಿ, ಹೆಸ್ಕಾಂ ಶಾಖಾಧಿಕಾರಿ ಸುನೀಲ ಮುಧೋಳ, ಗ್ರಾಂ.ಪಂ. ಅಭಿವೃದ್ದಿ ಅಧಿಕಾರಿ ಶಿವಾನಂದ ಬಿರಾದರ, ಗ್ರಾಮ ಆಡಳಿತ ಅಧಿಕಾರಿ ಮಂಜುನಾಥ ನೀಲನ್ನವರ, ಹೆಸ್ಕಾಂ ಸಿಬ್ಬಂದಿ ಎಫ್. ಎಚ್. ಪಾಲ್ಟನ್, ಕಿರಣ ಕಲ್ಲೋಳಿ, ಮಲ್ಲೇಶ ಸನದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿ ವಿದ್ಯುತ್ ಸಂಪರ್ಕ ಸುಗಮಗೊಳಿಸಿದರು.





# ಹಳ್ಳೂರ ಹೇಳಿಕೆ ಹಿಂಪಡೆಯಲಿ: ಮುತ್ತಣ್ಣವರ




**ಹುಬ್ಬಳ್ಳಿ:** ಕೇಂದ್ರ ಸಚಿವ ಪ್ರಹ್ಲಾದ ಜೋಶಿಯವರನ್ನು ಧಾರವಾಡದ ಹಿಟ್ಲರ್ ಎಂದು ಕರೆದಿರುವ ಹು–ಧಾ ಮಹಾನಗರ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಅಲ್ತಾಫ್ ಹಳ್ಳೂರ ಅವರ ಹೇಳಿಕೆ ಖಂಡನೀಯ ಎಂದು ಮಹಾನಗರಪಾಲಿಕೆ ಮಾಜಿ ಸದಸ್ಯ ಶಿವಾನಂದ ಮುತ್ತಣ್ಣವರ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಗದೀಶ ಶೆಟ್ಟರ್ ಅವರು ಏರ್ಪಡಿಸಿದ್ದ ಆತ್ಮಾವಲೋಕನ ಸಭೆಯಲ್ಲಿ ಜೋಶಿಯವರಿಗೆ ಹಿಟ್ಲರ್ ಎಂದು ಹೇಳಿರುವುದು ಸರಿಯಾದ ನಡೆಯಲ್ಲ ಎಂದರು.

ಹಿಟ್ಲರ್ ಎಂಬ ಪದ ಬಳಕೆ ಮಾಡಿದ್ದಿರಲ್ಲ. ಈ ಹಿಂದೆ ನಿಮ್ಮ ಸರ್ಕಾರ ಅಧಿಕಾರದಲ್ಲಿ ದ್ದಾಗ ಉಸ್ತುವಾರಿ ಸಚಿವರಾದವರು ಇದೇ ಜಗದೀಶ ಶೆಟ್ಟರ್ ಹಾಗೂ ಪ್ರಹ್ಲಾದ ಜೋಶಿಯವರಿಗೆ ಗೊಡ್ಡೆಮ್ಮೆ ಎಂದಿದ್ದರು. ಕಿಮ್ಸ್ ಆಸ್ಪತ್ರೆ ವೈದ್ಯನ ಮೇಲೆ ಹಲ್ಲೆ ನಡೆಸಿದ್ದರು. ಹಾಡು ಹಗಲೇ ಸುಪಾರಿ ಕೊಟ್ಟು ಯೋಗೀಶ ಗೌಡ ಗೌಡರ ಕೊಲೆ ಮಾಡಿಸಿರುವುದು ಸಜ್ಜನತನವೇ. ಅವರದ್ದು ಹಿಟ್ಲರ್ ನಡೆಯಲ್ಲವೇ ಎಂದು ಪ್ರಶ್ನಿಸಿದರು.

ರಾಜಕೀಯ ಜೀವನದಲ್ಲಿ ಜೋಶಿಯವರು ಕಪ್ಪು ಚುಕೆ ಇಲ್ಲದಂತೆ, ಕಳೆದ ನಾಲ್ಕು ಬಾರಿ ಸಂಸದರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಂತವರ ಬಗ್ಗೆ ಈ ರೀತಿ ಹೇಳಿಕೆ ನೀಡುವುದು ಸರಿಯಲ್ಲ. ಮತದಾರರು ಕಾಂಗ್ರೆಸ್ಸಿಗರಿಗೆ ಚುನಾವಣೆಯಲ್ಲಿ ಮತದಾರರು ಪಾಠ ಕಲಿಸಲಿದ್ದಾರೆ. ಹೇಳಿಕೆ ಹಿಂಪಡೆದು ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ರಾಜು ಜೋಸೆಫ್, ಸಿದ್ದಣ್ಣ ಅಮರಾವತಿ, ಗಣೇಶ್ ಅಮರಾವತಿ, ಶ್ರೀನಿವಾಸ್ ದಲಬಂಜನ, ವಿಜಯಕುಮಾರ್ ಅಪ್ಪಾಜಿ ಉಪಸ್ಥಿತರಿದ್ದರು.

# ಭೇಡಾ ಐಟಿಐದಲ್ಲಿ ಬೀಳ್ಕೊಡುಗೆ

**ಹುಬ್ಬಳ್ಳಿ:** ರಾಜನಗರ ಹುಬ್ಬಳ್ಳಿಯಲ್ಲಿರುವ ಶ್ರೀ ಮಹಾವೀರ ಶಿಕ್ಷಣ ಸಂಸ್ಥೆಯ, ಶಾ.ಡಿ.ಜೆ.ಭೇಡಾ ಐ.ಟಿ.ಐನ ಉಗ್ರಾಣ ಸಹಾಯಕರಾಗಿ 32 ವರ್ಷ ಸೇವೆ ಸಲ್ಲಿಸಿ ವಯೋ ನಿವೃತ್ತಿಗೊಂಡ ಚಂದ್ರಕಾಂತ ಪಾಟೀಲ ಇವರನ್ನು ಬೀಳ್ಕೊಡಲಾಯಿತು.

ಶ್ರೀ ಮಹಾವೀರ ಶಿಕ್ಷಣ ಸಂಸ್ಥೆ ಅಧ್ಯಕ್ಷ ಪ್ರೊ.ಎಸ್.ಕೆ.ಆದಪ್ಪನವರ ಅಧ್ಯಕ್ಷತೆ ವಹಿಸಿ, ವೃತ್ತಿಯಿಂದ ನಿವೃತ್ತಿಗೊಂಡ ನೌಕರರು ನಿವೃತ್ತಿ ನಂತರದ ಜೀವನದಲ್ಲಿ ಸಮಾಜಮುಖಿಯಾಗಿ ಹಾಗೂ ಸಂಘ ಜೀವಿಯಾಗಿರಬೇಕು ಮತ್ತು ತಾವು ಸೇವೆಸಲ್ಲಿಸಿದ ಸಂಸ್ಥೆಯ ಒಳಿತಿಗಾಗಿ ಬದ್ಧರಾಗಿರಬೇಕು ಎಂದು ತಿಳಿಸಿದರು.

ಸಂಸ್ಥೆ ಕಾರ್ಯದರ್ಶಿ ಆರ್.ಟಿ.ಅಣ್ಣಿಗೇರಿ, ಆರ್.ಟಿ.ತವನಪ್ಪನವರ ಮಾತನಾಡಿದರು. ಐ.ಟಿ.ಐದ ಪ್ರಾಚಾರ್ಯ ಆರ್.ಬಿ. ಸಾಬಣ್ಣವರ, ತರಬೇತಿ ಅಧಿಕಾರಿ ಆರ್.ಎನ್.ಕೋಟಿ, ಕಚೇರಿ ಅಧೀಕ್ಷಕ ವಿಜಯಲಕ್ಷ್ಮಿ ಜಾಪ್ಲಿನ, ವಿಜಯಲಕ್ಷ್ಮಿ ಮಂದವಾಡಿ, ಎಸ್. ಆರ್.ನೀರಾವರಿ, ಪಿ.ಆರ್.ತವನಪ್ಪನವರ, ಡಾ.ಸುಜಾತಾ ನಲವಡಿ, ಹರ್ಷ ಆದಪ್ಪನವರ, ಲಕ್ಷ್ಮಿ ಹೂಗಾರ, ಪದ್ಮಾ ದಯನ್ನವರ, ರವಿಕುಮಾರ ಎನ್. ಕೋಟಿ ಸೇರಿದಂತೆ ಇತರರಿದ್ದರು. ಆರ್. ಎನ್.ಕೋಟಿ ನಿರೂಪಿಸಿದರು. ಗುರುಸಿದ್ದಪ್ಪ ಬಡಿಗೇರ ಸ್ವಾಗತಿಸಿ ವಂದಿಸಿದರು.



# ಶಿಕ್ಷಣ ಕಾಶಿಗೆ ಮೂಲಸೌಕರ್ಯ ಒದಗಿಸುವುದು ನನ್ನ ಮೊದಲ ಆದ್ಯತೆ



**ರಾಯಬಾಗ:** ವಿಧಾನಸಭಾ ಕ್ಷೇತ್ರದ ಮಜಲಟ್ಟಿ ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿಗೆ ರಾಯಭಾಗದ ಶಾಸಕರು ಡಿ ಎಂ ಐಹೊಳೆ ಅವರು ಭೇಟಿ ನೀಡಿ, ಬೋಧನೆ, ಕಲಿಕಾ ಸಾಮಗ್ರಿ, ಹಾಗೂ ಕಾಲೇಜಿನ ಮೂಲಸೌಕರ್ಯ ಕುರಿತು ಭೋದನಾ ಸಿಬ್ಬಂದಿ ಹಾಗೂ ಸ್ಥಳೀಯ ಹಿರಿಯರೊಂದಿಗೆ ಸುದೀರ್ಘವಾಗಿ ಚರ್ಚಿಸಲಾಯಿತು.

ಮಜಲಟ್ಟಿ ಗ್ರಾಮವು ಈ ಭಾಗದ ''ಶಿಕ್ಷಣ ಕಾಶಿ'' ಎಂದೇ ಪ್ರಸಿದ್ಧಿ ಗಳಿಸಿದೆ. ಇಲ್ಲಿ ವ್ಯಾಸಂಗ ಮಾಡಿದ ಅನೇಕ ವಿದ್ಯಾರ್ಥಿಗಳು ಇಂದು ಉನ್ನತ ಹುದ್ದೆಗಳಲ್ಲಿ ಇರುವುದು ಹೆಮ್ಮೆಯ ಸಂಗತಿ. ಅನೇಕ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಇಲ್ಲಿ ತಲೆ ಎತ್ತಿರುವ ಹಿನ್ನೆಲೆಯಲ್ಲಿ ಒಂದರಿಂದ ಹನ್ನೆರಡನೇ ತರಗತಿಯವರೆಗೆ ಗುಣಮಟ್ಟದ ಶಿಕ್ಷಣ ಸಿಗುತ್ತದೆ. ಶಿಕ್ಷಣ ಪ್ರೇಮಿಗಳಾಗಿದ್ದ ದಿವಂಗತ ಶ್ರೀ ಬಿ.ಆರ್. ಸಂಗಪ್ಪಗೋಳ ಅವರ ಪ್ರಯತ್ನದ ಫಲವಾಗಿ ಇದೆಲ್ಲಾ ಸಾಧ್ಯವಾಗಿದೆ.

ಇಂತಹ ಶಿಕ್ಷಣ ಕಾಶಿಗೆ ಮೂಲಸೌಕರ್ಯ ಒದಗಿಸುವುದು ನನ್ನ ಮೊದಲ ಆದ್ಯತೆ ಆಗಿದೆ. ಎಂದರು ಈ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆ ಶಿಕ್ಷಕರು ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ವಾಕರಸಾಸಂ ಸಾಫ್ಟ್‌ವೇರ್ ಉನ್ನತಿಕರಣ ಪೂರ್ಣ




**ಹುಬ್ಬಳ್ಳಿ:** ಕೆಎಲ್‌ಇ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ(ಐಟಿ) ಸಹಯೋಗದೊಂದಿಗೆ ವಾಕರಸಾ ಸಂಸ್ಥೆಯ ಎರಡು ಡಿಪೋಗಳ ಕಾರ್ಯನಿರ್ವಹಣೆಯ ಸಾಫ್ಟ್‌ವೇರ್ ಉನ್ನತಿಕರಣ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ.

ಕೆಎಲ್‌ಇ ಐಟಿ ಕಂಪ್ಯೂಟರ್ ಸೈನ್ಸ್ ವಿಭಾಗದ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳ ತಂಡವು ಓರಕಲ್ 8ಐ ಡೇಟಾಬೇಸ್ ಅನ್ನು ಓರಕಲ್ 10ಜಿಗೆ ಉನ್ನತಿಕರಿಸಿದ್ದಾರೆ. ಈಚೆಗೆ ಇದರ ಕಾರ್ಯನಿರ್ವಹಣೆಯನ್ನು ಯಶಸ್ವಿಯಾಗಿ ಪರೀಕ್ಷಿಸಲಾಗಿದೆ.

ಈ ಸಂಬಂಧ ಸಂಸ್ಥೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ವಾಕರಸಾ ಸಂಸ್ಥೆಯ ಎಂಡಿ ಭರತ ಎಸ್., ಕೆಎಲ್‌ಇ ಐಟಿಯವರು ಸಾಫ್ಟ್‌ವೇರ್ ಉನ್ನತಿಕರಣ ವನ್ನು ಉತ್ತಮವಾಗಿ ನಿರ್ವಹಿಸಿದ್ದಾರೆ. ಇನ್ನು ಹೆಚ್ಚಿನ ಸಾಫ್ಟ್‌ವೇರ್ ಉನ್ನತಿಕರಣ ಯೋಜನೆಗಳಲ್ಲಿ ಅವರನ್ನು ತೊಡಗಿಸಿಕೊಳ್ಳಲು ಬಯಸುತ್ತೇವೆ ಎಂದರು.

ಕಾಲೇಜಿನ ಪ್ರಾಚಾರ್ಯ ಡಾ.ಶರದ ಜೋಶಿ ಮಾತನಾಡಿ, ವಾಕರಸಾ ಸಂಸ್ಥೆಯ ಅನೇಕ ಪ್ರಕ್ರಿಯೆಗಳನ್ನು ಉನ್ನತಿಕರಿಸಲು ನಾವು ಅಗತ್ಯ ತಂತ್ರಜ್ಞಾನ ಮತ್ತು ಸಾಮರ್ಥ್ಯವನ್ನು ಹೊಂದಿದ್ದೇವೆ. ಸಂಸ್ಥೆಯ ದೈನಂದಿನ ಚಟುವಟಿಕೆ ಹೊಸ ಪರಿಹಾರ ಒದಗಿಸಲು ನಮ್ಮಿಂದ ಸಾಧ್ಯವಿದೆ ಎಂದು ಹೇಳಿದರು. ಕಾಲೇಜಿನ ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಾದ ಅಮಿತ್, ಧೀರಜ್, ಜೋಸೆಫ್, ಪ್ರಮೋದ ಹಾಗೂ ಜಯಂತ ಅವರಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ಯರ್ರಿಸ್ವಾಮಿ ಟಿ., ಡೀನ್ ಡಾ. ಮನು ಟಿ.ಎಂ., ಪ್ರೊ. ಪ್ರದೀಪ್, ಮಹಾಂತೇಶ ಕಪ್ಲಿ, ರವೀಶ, ಸಂತೋಷ್ ಇತರರಿದ್ದರು.

# ಚಿಕಿತ್ಸೆ ವೆಚ್ಚ ಭರಿಸಲು ಸೆಕ್ಸ್ ಗೆ ಸಹಕರಿಸುವಂತೆ ಒತ್ತಡ: ಬ್ರಿಜ್ ಭೂಷಣ್ ವಿರುದ್ಧದ ಎಫ್‌ಐಆರ್ ನಲ್ಲಿ ಆರೋಪ

ನವದೆಹಲಿ: ಭಾರತೀಯ ಕುಸ್ತಿ ಒಕ್ಕೂಟದ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ಅವರು ಉಸಿರಾಟವನ್ನು ಪರೀಕ್ಷಿಸುವ ನೆಪದಲ್ಲಿ ಮಹಿಳಾ ಅಥ್ಲೀಟ್‌ಗಳನ್ನು ಅನುಚಿತವಾಗಿ ಸ್ಪರ್ಶಿಸುತ್ತಿದ್ದರು ಮತ್ತು ಅವರನ್ನು ತಡೆದು ಅಸಮರ್ಪಕ ವೈಯಕ್ತಿಕ ಪ್ರಶ್ನೆಗಳನ್ನು ಕೇಳುತ್ತಿದ್ದರು ಎಂದು ದೆಹಲಿ ಪೊಲೀಸರು ಬಿಜೆಪಿ ಸಂಸದನ ವಿರುದ್ಧ ದಾಖಲಿಸಿರುವ ಎಫ್‌ಐಆರ್ ನಲ್ಲಿ ಆರೋಪಿಸಿದ್ದಾರೆ.

ಟೂರ್ನಮೆಂಟ್‌ಗಳಲ್ಲಿ ಉಂಟಾದ ಗಾಯಗಳಿಗೆ ಚಿಕಿತ್ಸೆ ಪಡೆಯಲು, ಫೆಡರೇಶನ್ ನಿಂದ ಚಿಕಿತ್ಸೆಯ ವೆಚ್ಚ ಭರಿಸಲು ಮತ್ತು ಆಹಾರ ತಜ್ಞರು ಅಥವಾ ತರಬೇತುದಾರರು ಅನುಮೋದಿಸದ ಆಹಾರ ನೀಡಲು ಸೆಕ್ಸ್ ಗೆ ಸಹಕರಿಸುವಂತೆ ಮಹಿಳಾ ಅಥ್ಲೀಟ್‌ಗಳಿಗೆ ಬ್ರಿಜ್ ಭೂಷಣ್ ಒತ್ತಾಯಿಸುತ್ತಿದ್ದರು ಎಂದು ಎಫ್‌ಐಆರ್ ನಲ್ಲಿ ಆರೋಪಿಸಲಾಗಿದೆ ಎಂದು ಎನ್ ಡಿಟಿವಿ ವರದಿ ಮಾಡಿದೆ.

ಬ್ರಿಜ್ ಭೂಷಣ್ ಅವರು ಅಪ್ರಾಪ್ತ ಮಹಿಳಾ ಅಥ್ಲೀಟ್‌ಗಳ ಎದೆಗೆ ಕೈಹಾಕುತ್ತಿದ್ದರು ಎಂದು ಆರೋಪಿಸಲಾಗಿದೆ. ಏಳು ಮಹಿಳಾ ಕುಸ್ತಿಪಟುಗಳು ನೀಡಿದ ದೂರುಗಳ ಆಧಾರದ ಮೇಲೆ ದೆಹಲಿಯ ಕನ್ನಾಟ್ ಪ್ಲೇಸ್ ಪೊಲೀಸ್ ಠಾಣೆಯಲ್ಲಿ ಬ್ರಿಜ್ ಭೂಷಣ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಏಪ್ರಿಲ್ 28 ರಂದು ಆರು ಕುಸ್ತಿಪಟುಗಳ ದೂರುಗಳನ್ನು ಸಂಯೋಜಿಸಿ ಒಂದು ಎಫ್‌ಐಆರ್ ಮತ್ತು ಅಪ್ರಾಪ್ತ ವಯಸ್ಕನ ತಂದೆ ನೀಡಿದ ದೂರಿನ ಆಧಾರದ ಮೇಲೆ ಮತ್ತೊಂದು ಪ್ರತ್ಯೇಕ ಎಫ್‌ಐಆರ್ ದಾಖಲಿಸಲಾಗಿದೆ. ಲಿಖಿತ ದೂರುಗಳನ್ನು ಏಪ್ರಿಲ್ 21 ರಂದು ಸಲ್ಲಿಸಲಾಗಿದೆ.

ಬ್ರಿಜ್ ಭೂಷಣ್ ಶರಣ್ ಸಿಂಗ್ ಅವರು ಲೈಂಗಿಕ ದೌರ್ಜನ್ಯದ ಎಲ್ಲಾ ಆರೋಪಗಳನ್ನು ನಿರಾಕರಿಸಿದ್ದಾರೆ.

ನನ್ನ ವಿರುದ್ಧದ ಒಂದೇ ಒಂದು ಆರೋಪ ಸಾಬೀತಾದರೆ ನಾನು ನೇಣು ಹಾಕಿಕೊಳ್ಳುತ್ತೇನೆ. ನಿಮ್ಮ ಬಳಿ (ಕುಸ್ತಿಪಟುಗಳು) ಏನಾದರೂ ಸಾಕ್ಷ್ಯಾಧಾರಗಳಿದ್ದರೆ ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಮತ್ತು ಯಾವುದೇ ಶಿಕ್ಷೆಯನ್ನು ಸ್ವೀಕರಿಸಲು ನಾನು ಸಿದ್ಧನಿದ್ದೇನೆ ಎಂದು ಬಿಜೆಪಿ ಸಂಸದ ಹೇಳಿದ್ದಾರೆ.

# ಮುಗಳಖೋಡದಲ್ಲಿ ಮೂಡಲಗಿ ವಿಶ್ವಾಸ ಸೊಸೈಟಿಯ ದ್ವಿತೀಯ ಶಾಖೆಯ ಪ್ರಾರಂಭೋತ್ಸವ



**ಮುಗಳಖೋಡ:** ಪಟ್ಟಣದ ಬಾಬಣ್ಣವರ ವಾಣಿಜ್ಯ ಸಂಕೀರ್ಣದಲ್ಲಿ ಇಂದು ಶುಕ್ರವಾರ ದಿನಾಂಕ 2 ರಂದು ವಿಶ್ವಾಸ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸಾಯಿಟಿಯ ದ್ವಿತೀಯ ಶಾಖೆಯನ್ನು ಮೂಡಲಗಿ ಸಿದ್ಧ ಸಂಸ್ಥಾನ ಮಠದ ಪೀಠಾಧಿಪತಿಗಳಾದ ದತ್ತಾತ್ರೇಯಬೋದ ಶ್ರೀಗಳ ಅಮೃತ ಹಸ್ತದಿಂದ ಉದ್ಘಾಟಿಸಲಾಯಿತು.

ಶ್ರೀ ಯಲ್ಲಾಲಿಂಗೇಶ್ವರ ಮಠದ ಅರ್ಚಕ ಮಹೇಶ, ಸಂಸ್ಥೆಯ ಅಧ್ಯಕ್ಷ ಡಾ. ರವಿಚಂದ್ರ ಈ ಕಂಕಣವಾಡಿ ಅಧ್ಯಕ್ಷತೆ ವಹಿಸಿದ್ದರು, ಮೂಡಲಗಿ ಚೈತನ್ಯ ಕ್ರೆಡಿಟ್ ಸೊಸಾಯಿಟಿಯ ಅಧ್ಯಕ್ಷ ತಮ್ಮಣ್ಣ ಕೆಂಚರಡ್ಡಿ,ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ ಬೆ ನಿರ್ದೇಶಕ ಡಾ. ಸಂಜಯ ಹೊಸಮಠ, ಕಾನೂನು ಸಲಹೆಗಾರ ಶಿವಬಸು ಹೊಸಟ್ಟಿ ಮುಖ್ಯ ಅತಿಥಿ ಸ್ಥಾನ ವಹಿಸಿದ್ದರು. ನಿರ್ದೇಶಕರಾದ ರಮೇಶ ಬಬಲಿ, ಆನಂದ ಕುಲಕರ್ಣಿ, ಡಾ.ಮಲ್ಲೇಶ ಕಾಲತಿಪ್ಪಿ, ಭೀಮಪ್ಪ ಪಾಟೀಲ, ಬಾಳಪ್ಪಾ ಬಬಲಿ, ಬಸಪ್ಪ ಗದಾಡಿ, ಸುರೇಶ ಮರೆನ್ನವರ,ಪ್ರಧಾನ ವ್ಯವಸ್ಥಾಪಕ ಶಿವಬಸು ಕಂಕಣವಾಡಿ ಸ್ಥಳೀಯ ವ್ಯವಸ್ಥಾಪಕ ವಿಠ್ಠಲ ಕುಟ್ರಿ , ಹಾಗೂ ಸ್ಥಳೀಯ ಆಡಳಿತ ಮಂಡಳಿ ಸಿಬ್ಬಂದಿ ವರ್ಗ ಮತ್ತು ಸ್ಥಳೀಯರಾದ ರಾಜು ಕುಲಿಗೊಡ, ಕರೆಪ್ಪ ಹಿಟ್ಟಣಗಿ ,ಮಲ್ಲಿಕಾರ್ಜುನ ಮುಧೋಳ,ಡಾ. ಗಜಾನನ ಕುಲಕರ್ಣಿ, ಬಸವರಾಜ ತೇರದಾಳ,ಸದಾಶಿವ ಬಡಿಗೇರ, ಶ್ರೀಮತಿ ಕಾಂಚನಾ ಬಡಿಗೇರ,ಇತರರ ಉಪಸ್ಥಿತರಿದ್ದರು.

# ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ವಿಜಯೋತ್ಸವ




**ಚಿಕ್ಕೋಡಿ:** ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಭರವಸೆ ನೀಡಿದ ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನರಿಗೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವುಕುಮಾರ ಹಸಿರು ನಿಶಾನೆ ತೋರಿಸಿದ ಹಿನ್ನಲ್ಲೆಯಲ್ಲಿ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಚಿಕ್ಕೋಡಿ ಬಸವ ಸರ್ಕಲದ ಇಂದಿರಾ ಗಾಂಧಿ ಭಾವಚಿತ್ರದ ಬಳಿ ಪುರಸಭೆ ಸದಸ್ಯ ಸಾಭೀರ ಜಮಾದಾರ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಬಳಿಕ ಮಾತನಾಡಿದ ಪುರಸಭೆ ಸದಸ್ಯ ಸಾಭೀರ ಜಮಾದಾರ ಅವರು, ಚುನಾವಣೆಯಲ್ಲಿ ಜನರಿಗೆ ಭರವಸೆ ನೀಡಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವುಕುಮಾರ ಗ್ಯಾರಂಟಿ ಯೋಜನೆ ನೀಡುವುದಾಗಿ ಸಚಿವ ಸಂಪುಟ ಸಭೆಯಲ್ಲಿ ತಿರ್ಮಾಣ ಮಾಡಿರುವುದು ರಾಜ್ಯದ ಜನರಿಗೆ ಸಂತಸ ಮೂಡಿದೆ ಎಂದರು.

ನುಡಿದಂತೆ ನಡೆದಿರುವುದು ಕಾಂಗ್ರೆಸ್ ಪಕ್ಷದ ಹೆಗ್ಗಳಿಕೆಯಾಗಿದೆ. ಗ್ಯಾರಂಟಿ ಯೋಜನೆ ನೀಡಿರುವುದು ಇಡೀ ದೇಶದಲ್ಲಿ ಕರ್ನಾಟಕ ರಾಜ್ಯ ಮೊದಲವಾಗಿದೆ. ಗ್ಯಾರಂಟಿ ಯೋಜನೆ ನೀಡುವುದಿಲ್ಲ ಎಂಬ ಕಾಲು ಎಳೆಯುವ ಬಿಜೆಪಿಯುವರಿಗೆ ಪಕ್ಷದ ನಾಯಕರು ತಕ್ಕ ಉತ್ತರ ನೀಡಿದ್ದಾರೆ. ಈ ಹಿಂದೆ ಪ್ರಧಾನಿ ನರೇಂದ್ರ ಮೋದಿ ಘೋಷಣೆ ಮಾಡಿರುವ 15 ಲಕ್ಷ ರೂ ಖಾತೆಗೆ ಜಮೆ ಆಗಿಲ್ಲ, ಅದನ್ನು ಬಿಟ್ಟು ಕಾಂಗ್ರೆಸ್ ಗ್ಯಾರಂಟಿ ಬಗ್ಗೆ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಾದ ಕ್ರಮವಲ್ಲ, ಈ ಹಿಂದೆ ಕಾಂಗ್ರೆಸ್ ಸರಕಾರ ದೇಶದ ಜನರಿಗೆ 72 ಸಾವಿರ ಕೋಟಿ ಸಾಲ ಮನ್ನಾ ಮಾಡಿ ಇತಿಹಾಸ ಬರೆದಿದೆ. ಕಾಂಗ್ರೆಸ್ ಸರ್ವಜನರ ಪಕ್ಷವಾಗಿದೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರಾದ ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ, ವಿ.ಪ.ಸದಸ್ಯ ಪ್ರಕಾಶ ಹುಕ್ಕೇರಿ ಮತ್ತು ಶಾಸಕ ಗಣೇಶ ಹುಕ್ಕೇರಿ ಬಡ ಜನರ ಪರವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸತೀಶ ಕುಲಕರ್ಣಿ, ಪುರಸಭೆ ಸದಸ್ಯ ಗುಲಾಬ ಬಾಗವಾನ ಮಾತನಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಎಸ್.ನಸಲಾಪೂರೆ, ಪುರಸಭೆ ಸದಸ್ಯ ಅನಿಲ ಮಾನೆ, ಸುರೇಶ ಬ್ಯಾಕೂಡೆ, ಇರ್ಫಾನ ಬೇಪಾರಿ ಮುಂತಾದವರು ಇದ್ದರು.

# ಕೊಪ್ಪಳ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನೆ



ಕೊಪ್ಪಳ : ಕೊಪ್ಪಳ ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು, ಬೀದಿ ದೀಪ ಅಳವಡಿಕೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ಹೇಳಿದರು.

ವಿವಿಧ ಹಣಕಾಸು ಯೋಜನೆಗಳು, ಕುಡಿಯುವ ನೀರಿನ ಯೊಜನೆ, ಸಕಾಲ, ಬಾಕಿ ವಸೂಲಾತಿ ಮತ್ತು ಮಳೆಗಾಲದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಜೂನ್ 2ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಮಳೆಗಾಲ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಈಗಾಗಲೇ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಮಿತಿಗಳನ್ನು ರಚಿಸಲಾಗಿದೆ. ಕಾಲಕಾಲಕ್ಕೆ ಈ ಸಮಿತಿಯಿಂದ ಸಭೆಗಳನ್ನು ನಡೆಸಿ ಮಳೆಗಾಲ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು.

ಈ ಹಿಂದ ನಡೆದ ಸಭೆಗಳಲ್ಲಿ ನಿರ್ದೇಶನ ನೀಡಿದಂತೆ ಮಳೆಗಾಲ ಆರಂಭ ಮುನ್ನ ಚರಂಡಿ ಶುಚಿತ್ವ ಮತ್ತು ಹೂಳೆತ್ತುವ ಕಾರ್ಯವನ್ನು ವೇಗಗೊಳಿಸಬೇಕು. ಮಳೆಗಳು ಆರಂಭವಾದಾಗ ಎಲ್ಲಿಯೂ ಸಹ ನೀರು ನಿಲ್ಲದಂತೆ ನೋಡಿಕೊಳ್ಳಬೇಕು.

ವಿಪರೀತ ರೀತಿಯಲ್ಲಿ ಮಳೆಗಳು ಸುರಿದಲ್ಲಿ ಅದರಿಂದಾಗುವ ತೊಂದರೆಗಳಿಗೆ ಕೂಡಲೇ ಸ್ಪಂದಿಸಿ ಪರಿಹಾರ ಕಲ್ಪಿಸಬೇಕು. ಈ ದಿಶೆಯಲ್ಲಿ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆರೋಗ್ಯ ನಿರೀಕ್ಷಕರು, ಪೌರ ಕಾರ್ಮಿಕರು ಮತ್ತು ಜೆಸಿಬಿ ಚಾಲಕರು ಸೇರಿದಂತೆ ಇನ್ನಿತರರನ್ನೊಳಗೊಂಡು ಕ್ಷಿಪ್ರ ಕಾರ್ಯಾಚರಣೆ ತಂಡಗಳನ್ನು ರಚಿಸಿ ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಮಳೆಯಿಂದಾಗಿ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಮನೆಗಳಿಗೆ ಹಾನಿಯಾದಲ್ಲಿ ಕೂಡಲೇ ಸಂಬಂಧಿಸಿದ ಎಂಜಿನಿಯರ್ ಅವರಿಂದ ಪರಿಶೀಲಿಸಿ ಹಾನಿಯಾದ ಪ್ರಮಾಣದ ಬಗ್ಗೆ ಅಯಾ ತಹಸೀಲ್ದಾರ ಅವರಿಗೆ ಪರಿಹಾರ ಕ್ರಮಕ್ಕಾಗಿ ವರದಿ ಸಲ್ಲಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅರ್ಹರಿಗೆ ಮನೆ ಹಂಚಿಕೆ ಪ್ರಕ್ರಿಯೆಯನ್ನು ಸಹ ಚುರುಕುಗೊಳಿಸಿ ಆಯಾ ಸ್ಥಳೀಯ ಸಂಸ್ಥೆಗಳಿಗೆ ನಿಗದಿಪಡಿಸಿದ ಗುರಿ ಸಾಧನೆಗೆ ಸಹ ಒತ್ತು ಕೊಡಬೇಕು.

ನಿವೇಶನಗಳ ಹಂಚಿಕೆಯ ಬಗ್ಗೆ ಸಮಿತಿಯಲ್ಲಿ ಚರ್ಚಿಸಿ ಸರ್ಕಾರದ ಮಾರ್ಗಸೂಚಿಯನ್ವಯ ನಿಯಮಾನುಸಾರ ಹಂಚಿಕೆ ಮಾಡಲು ಬೇಗನೇ ತೀರ್ಮಾನ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪೂರ್ವ ಮುಂಗಾರು ಈಗಾಗಾಲೇ ಆರಂಭಗೊಂಡಿದ್ದು ಮಳೆಯಿಂದಾಗಿ ಖಾಲಿ ನಿವೇಶನಗಳಲ್ಲಿ ಸಾಕಷ್ಟು ನೀರು ನಿಂತು ಅದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ಡೆಂಗೆ, ಚಿಕೂನ್‌ಗುನ್ಯದಂತಹ ಕಾಯಿಲೆಗಳಿಗೆ ಜನರು ತುತ್ತಾಗದ ಹಾಗೆ ಖಾಲಿ ನಿವೇಶನಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

ಆಯಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳಡಿ ಕೈಗೆತ್ತಿಕೊಂಡ ಕಾಮಗಾರಿಗಳನ್ನು ಸರ್ಕಾರದ ಮಾರ್ಗಸೂಚಿಯನುಸಾರ ಕೈಗೊಂಡು ಅವುಗಳನ್ನು ಪೂರ್ಣಗೊಳಿಸಿ ಜನತೆಗೆ ಅನುಕೂಲ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಆಯಾ ನಗರ ಸ್ಥಳೀಯ ಸಂಸ್ಥೆಗಳು ವಿವಿಧ ಯೋಜನೆಗಳಡಿ ನಿಗದಿಪಡಿಸಿದ ಗುರಿಯನುಸಾರ ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಂಡು ಆಯ್ಕೆ ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕು. ಸಕಾಲ ಅರ್ಜಿಗಳನ್ನು ಬೇಗನೇ ವಿಲೇಗೊಳಿಸಬೇಕು. ಹಂತವಾರು ಮನೆಗಳ ನಿರ್ಮಾಣ ಕಾರ್ಯವನ್ನು ವೇಗಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಬೀದರ ನಗಾರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಕಾವ್ಯರಾಣಿ ಕೆ.ವಿ. ಹಾಗೂ ಇನ್ನಿತರ ನಗರಸಭೆಗಳ ಪೌರಾಯುಕ್ತರು, ಪುರಸಭೆ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಹಾಗೂ ಇನ್ನಿತರ ಅಧಿಕಾರಿಗಳು ಇದ್ದರು.

## ನೆಟ್‌ಫ್ಲಿಕ್ಸ್ ವೆಬ್ ಸೀರೀಸ್ 'ಸ್ಕೂಪ್' ತಡೆಗೆ ಹೈಕೋರ್ಟ್ ಮೆಟ್ಟಿಲೇರಿದ ಛೋಟಾ ರಾಜನ್



ದೆಹಲಿ: ಜೈಲಿನಲ್ಲಿರುವ ಗ್ಯಾಂಗ್ಸ್ಟರ್ ರಾಜೇಂದ್ರ ನಿಕಾಳ್ಜೆ ಅಲಿಯಾಸ್ ಛೋಟಾ ರಾಜನ್ ಅವರ ವ್ಯಕ್ತಿ ಚರಿತ್ರೆಗೆ ಸಂಬಂಧಿಸಿದಂತೆ ಜೂನ್ 2 ರಂದು ನೆಟ್‌ಫ್ಲಿಕ್ಸ್‌ನಲ್ಲಿ ಬಿಡುಗಡೆಯಾಗಲಿರುವ ವೆಬ್ ಸರಣಿ "ಸ್ಕೂಪ್" ಬಿಡುಗಡೆಗೆ ತಡೆಯಾಜ್ಞೆ ಕೋರಿ ಗುರುವಾರ ಬಾಂಬೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಜೊತೆಗೆ ಟ್ರೇಲರ್ನ್ನು ತೆಗೆದುಹಾಕಲು ನ್ಯಾಯಾಲಯ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಪ್ರಸ್ತುತ ರಾಷ್ಟ್ರ ರಾಜಧಾನಿಯ ತಿಹಾರ್ ಜೈಲಿನಲ್ಲಿರುವ ಛೋಟಾ ರಾಜನ್, ತನ್ನ ಪೂರ್ವಾನುಮತಿ ಪಡೆಯದೆ ತನ್ನ ವ್ಯಕ್ತಿತ್ವದ ಬಗ್ಗೆ ಬರೆಯುವುದು ಅಥವಾ ಚಲನಚಿತ್ರ ಮಾಡುವುದು ಅಥವಾ ದುರ್ಬಳಕೆ ಮಾಡುವುದು ತನ್ನ ವ್ಯಕ್ತಿತ್ವದ ಹಕ್ಕುಗಳ ಉಲ್ಲಂಘನೆ ಮತ್ತು ಮಾನನಷ್ಟವಾಗಿದೆ ಎಂದು ನ್ಯಾಯಾಲಯದ ಮುಂದೆ ಅರ್ಜಿ ಸಲ್ಲಿಸಿದ್ದಾರೆ ಎಂದು ವರದಿ ಮಾಡಲಾಗಿದೆ.

ಭಾರತಕ್ಕೆ ಹಸ್ತಾಂತರಿಸಲ್ಪಟ್ಟಿರುವ, ಈಗಾಗಲೇ ಜೈಲಿನಲ್ಲಿರುವ ಗ್ಯಾಂಗ್ಸ್ಟರ್ ಛೋಟಾ ರಾಜನ್, ತನ್ನ ವ್ಯಕ್ತಿತ್ವಕ್ಕೆ ಧಕ್ಕೆ ತರುವ ವೆಬ್ ಸರಣಿಯ ತಯಾರಕರನ್ನು ನಿರ್ಬಂಧಿಸುವಂತೆ ತಡೆಯಾಜ್ಞೆಯನ್ನು ಕೋರಿದ್ದಾನೆ. ಈಗಾಗಲೇ ಟ್ರೇಲರ್ನ್ನು ಪ್ರಸಾರ ಮಾಡುವ ಮೂಲಕ ವೆಬ್ ಸರಣಿಯ ತಯಾರಕ ರು ಗಳಿಸಿದ ಹಣವನ್ನು ವೆಬ್ ಸರಣಿಯ ತಯಾರಕರು 1 ಕೋಟಿ ರೂ, ನಂತೆ ನೀಡಬೇಕು ಎಂದು ಹೇಳಿದ್ದಾರೆ.

## ಮಣಿಪುರ ಹಿಂಸಾಚಾರದಲ್ಲಿ 98 ಸಾವು, 310 ಮಂದಿ ಗಾಯ: ಸರ್ಕಾರ



ಇಂಪಾಲ: ಒಂದು ತಿಂಗಳ ಹಿಂದೆ ಮಣಿಪುರದಲ್ಲಿ ನಡೆದ ಜನಾಂಗೀಯ ಹಿಂಸಾಚಾರದಲ್ಲಿ ಕನಿಷ್ಠ 98 ಜನರು ಸಾವನ್ನಪ್ಪಿದ್ದು, 310 ಜನರು ಗಾಯಗೊಂಡಿದ್ದಾರೆ ಎಂದು ಸರ್ಕಾರ ಶುಕ್ರವಾರ ಹೇಳಿದೆ. ಪ್ರಸ್ತುತ ಒಟ್ಟು 37,450 ಜನರು 272 ಪರಿಹಾರ ಶಿಬಿರಗಳಲ್ಲಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ವಿವರ ಒದಗಿಸಿದೆ.

ಮೇ 3 ರಂದು ರಾಜ್ಯದಲ್ಲಿ ಹಿಂಸಾಚಾರ ಭುಗಿಲೆದ್ದ ನಂತರ ಒಟ್ಟು 4,014 ಬೆಂಕಿ ಹಚ್ಚಿದ ಪ್ರಕರಣಗಳು ವರದಿಯಾಗಿದ್ದು, ಮೃತರ ಸಂಖ್ಯೆ 98 ಆಗಿದ್ದು, 310 ಮಂದಿ ಗಾಯಗೊಂಡಿದ್ದಾರೆ. ಕಳೆದೊಂದು ತಿಂಗಳಿನಿಂದ 3,734 ಪ್ರಕರಣಗಳನ್ನು ಪೊಲೀಸರು ದಾಖಲಿಸಿದ್ದು, ಹಿಂಸಾಚಾರದಲ್ಲಿ ತೊಡಗಿಕೊಂಡಿದ್ದ 65 ಜನರನ್ನು ಬಂಧಿಸಿದ್ದಾರೆ ಹೇಳಲಾಗಿದೆ.

ವಿವಿಧ ಭದ್ರತಾ ಏಜೆನ್ಸಿಗಳಿಂದ ಸಂಘಟಿತ ಪ್ರಯತ್ನ ನಡೆಯುತ್ತಿರುವುದರಿಂದ ದುಷ್ಕರ್ಮಿಗಳು ಗುಂಡು ಹಾರಿಸುವ ಅಥವಾ ಮನೆಗಳಿಗೆ ಬೆಂಕಿ ಹಚ್ಚುವ ಘಟನೆಗಳು ಈಗ ಅಪರೂಪವಾಗುತ್ತಿವೆ. ಸೇನೆ, ಅಸ್ಸಾಂ ರೈಫಲ್ಸ್, ಸಿಎಪಿಎಫ್‌ಗಳು ಮತ್ತು ಸ್ಥಳೀಯ ಪೊಲೀಸರನ್ನು ಸೂಕ್ಷ್ಮ ಸ್ಥಳಗಳಲ್ಲಿ ನಿಯೋಜಿಸಲಾಗಿದೆ. ಇಲ್ಲಿಯವರೆಗೆ, ಕೇಂದ್ರ ಸಶಸ್ತ್ರ ಪಡೆಗಳ 84 ತುಕಡಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ ಎಂದು ಹೇಳಿಕೆ ತಿಳಿಸಿದೆ.

ಕಸಿದುಕೊಂಡ ಶಸಾಸ್ತ್ರಗಳನ್ನು ಒಪ್ಪಿಸುವಂತೆ ಜನತೆಯಲ್ಲಿ ಪೊಲೀಸರು ಮನವಿ ಮಾಡಿದ್ದು, ಒಂದು ವೇಳೆ ದೋಚಲಾದ ಶಸಾಸ್ತ್ರಗಳು ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

## ಜಮ್ಮು ಮತ್ತು ಕಾಶ್ಮೀರದ ಕಥುವಾದಲ್ಲಿ 'ಅಕ್ರಮ' ವಾಣಿಜ್ಯ ಸಂಕೀರ್ಣ ತೆರವು ಕಾರ್ಯಾಚರಣೆ ವಿರುದ್ಧ ಪ್ರತಿಭಟನೆ



ಜಮ್ಮು ಮತ್ತು ಕಾಶ್ಮೀರದ ಕಥುವಾ ಜಿಲ್ಲೆಯಲ್ಲಿ 'ಅಕ್ರಮ' ವಾಣಿಜ್ಯ ಸಂಕೀರ್ಣಗಳ ತೆರವು ಕಾರ್ಯಾಚರಣೆಗೆ ಅಧಿಕಾರಿಗಳು ಮುಂದಾಗಿದ್ದು ಇದರ ಬೆನ್ನಲ್ಲೇ ಆಡಳಿತದ ವಿರುದ್ಧ ವ್ಯಾಪಾರಿಗಳನ್ನು ಪ್ರತಿಭಟನೆ ನಡೆಸಿದರು.

ಯಾವುದೇ ನೋಟಿಸ್ ನೀಡದೆ ಕಟ್ಟಡ ಕೆಡವುವ ಕಾರ್ಯ ನಡೆದಿದೆ ಎಂದು ಕಟ್ಟಡ ಮಾಲೀಕರು ಆರೋಪಿಸಿದ್ದಾರೆ. ಅವರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಶುಕ್ರವಾರ ವಿಚಾರಣೆಯನ್ನು ನಿಗದಿಪಡಿಸಲಾಗಿದೆ ಎಂದು ವ್ಯಾಪಾರಿಗಳು ಹೇಳಿದರು.

ಕಥುವಾ ಮುನ್ಸಿಪಲ್ ಕೌನ್ಸಿಲ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಸಂತೋಷ್ ಕೊತ್ವಾಲ್ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ, ಸಿಬ್ಬಂದಿಗಳು ಮತ್ತು ಯಂತ್ರಗಳ ಭಾರೀ ನಿಯೋಜನೆಯ ನಡುವೆ, ಶಾಹಿದಿ ಚೌಕ್ ರಸ್ತೆಯಲ್ಲಿರುವ ಆವರಣದಲ್ಲಿ ಧ್ವಂಸ ಕಾರ್ಯವನ್ನು ಕೈಗೊಳ್ಳಲು ಪ್ರಯತ್ನಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ಕಟ್ಟಡದ ಮಾಲೀಕ ಮೊಹಿಂದರ್ ಮಹಾಜನ್ ಸ್ಥಳಕ್ಕಾಗಮಿಸಿ ಸರ್ಕಾರದ ಕ್ರಮಕ್ಕೆ ಆಕ್ಷೇಪ ವ್ಯಕ್ತಪಡಿಸಿದರು. ಡೆಮಾಲಿಷನ್ ನೋಟಿಸ್ ತೋರಿಸುವಂತೆ ಸಿಇಒಗೆ ಸೂಚಿಸಿದರು. ಸಿಇಒ ಅದನ್ನು ಪ್ರಸ್ತುತಪಡಿಸಲು ವಿಫಲರಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇದರ ಪರಿಣಾಮವಾಗಿ ವ್ಯಾಪಾರಿಗಳ ಸಮುದಾಯದ ಪ್ರತಿಭಟನೆಗೆ ಕಾರಣವಾಯಿತು.

ಕಟ್ಟಡವನ್ನು ಅಕ್ರಮವಾಗಿ ನಿರ್ಮಿಸಲು ಕಟ್ಟಡದ ಮಾಲೀಕರು ಅಧಿಕಾರಿಗಳಿಗೆ ಲಂಚ ನೀಡಿದ್ದಾರೆ ಎಂದು ಅಧಿಕಾರಿಗಳು ಆರೋಪಿಸಿದರು. ಇದರ ಪರಿಣಾಮವಾಗಿ ಮಾಲೀಕರು ಮತ್ತು ಅಧಿಕಾರಿಗಳ ನಡುವೆ ತೀವ್ರ ವಾಗ್ವಾದ ನಡೆಯಿತು. ಎರಡೂ ಕಡೆಯವರ ನಡುವೆ ಘರ್ಷಣೆ ತಪ್ಪಿಸಲು ಪೊಲೀಸರು ಮಧ್ಯಪ್ರವೇಶ ಮಾಡಬೇಕಾಯಿತು.

ವ್ಯಾಪಾರ ಮಂಡಳಿ ಕಥುವಾ ಬೆಳವಣಿಗೆಯ ಬಗ್ಗೆ ಕಳವಳ ವ್ಯಕ್ತಪಡಿಸಿದೆ. ಸಂಘಟನೆಯ ಸದಸ್ಯರು ಕಥುವಾ ಜಿಲ್ಲಾಧಿಕಾರಿ ರಾಕೇಶ್ ಮಿನ್ಹಾಸ್ ವಿರುದ್ಧ ಧರಣಿ ನಡೆಸಿ ಬಿಜೆಪಿ ವಿರುದ್ಧ ಘೋಷಣೆಗಳನ್ನು ಕೂಗಿದರು.

## ಪ್ರತಿ ಜಿಲ್ಲೆಯಲ್ಲಿ ಬಸ್ಸುಗಳ ಸಂಖ್ಯೆ ಜಾಸ್ತಿ ಮಾಡಿ ಮೂಲಕ ಜನರಿಗೆ ಅನುಕೂಲ ಮಾಡಿಕೊಡಿ ಮುಖ್ಯಮಂತ್ರಿಗಳಿಗೆ ಶರಣಪ್ಪ ಮಾನವಿ



ಗಂಗಾವತಿ: ಆಮ್ ಆದ್ಮಿ ಪಾರ್ಟಿ, ಜಂಟಿ ಕಾರ್ಯದರ್ಶಿ. ಕರ್ನಾಟಕ ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿಗಳು ಇದೀಗ ತಾನೇ 5 ಗ್ಯಾರಂಟಿ ಯೋಜನೆಗಳ ಸಂಬಂಧಪಟ್ಟಂತೆ ಘೋಷಣೆ ಮಾಡಿದ್ದು ಸ್ವಾಗತ. ಸದರಿ ಘೋಷಣೆಗ ಅನುಗುಣವಾಗಿ ಗ್ಯಾರಂಟಿ ಯೋಜನೆಗಳ ಲಾಭ ಕರ್ನಾಟಕದ ಜನತೆಗೆ ದೊರೆಯಬೇಕಾದರೆ ಕರ್ನಾಟಕ ಸರಕಾರವು ವ್ಯವಸ್ಥೆಯನ್ನು ಸರಿಪಡಿಸಬೇಕಾಗುತ್ತದೆ.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಗ್ಯಾರಂಟಿ ಯೋಜನೆಯನ್ನು ಘೋಷಣೆ ಮಾಡಿರುವ ಸರ್ಕಾರ ಕೂಡಲೇ ಬಸ್ಸುಗಳ ಸಂಖ್ಯೆಯನ್ನು ಜಾಸ್ತಿ ಮಾಡುವ ಮೂಲಕ ಕರ್ನಾಟಕದ ಎಲ್ಲ ಮಹಿಳೆಯರಿಗೆ ಸದರಿ ಯೋಜನೆಯ ಲಾಭ ದೊರೆಯು ವಂತೆ ಮಾಡಬೇಕಾದದ್ದು ತುರ್ತಾಗಿ ಆಗಬೇಕಾದ ಕೆಲಸವಾಗಿದೆ. ಇಲ್ಲದೆ ಹೋದಲ್ಲಿ ಮಹಿಳೆಯರು ಸದರಿ ಉಚಿತ ಬಸ್ ಪ್ರಯಾಣ ಯೋಜನೆಯ ಲಾಭ ಪಡೆದುಕೊಳ್ಳಲು ಇರುವ ಅತಿ ಕಡಿಮೆ ಬಸ್ಸುಗಳಿಗೆ ಪ್ರಯಾಣಿಸಲು ಪ್ರಯತ್ನಿಸಿ ಹೊಡೆದಾಡಿಕೊಂಡು ಸದರಿ ಯೋಜನೆಯಿಂದ ಅನಾಹುತ ಅನುಭವಿಸಬೇಕಾಗುತ್ತದೆ.

ಈ ರೀತಿಯ ಅನಾಹುತಗಳನ್ನು ತಪ್ಪಿಸಲು ಕರ್ನಾಟಕ ಸರ್ಕಾರ ಈ ಕೂಡಲೇ ಮುನ್ನೆಚ್ಚರಿಕೆ ಕ್ರಮವಾಗಿ ಕರ್ನಾಟಕದ ಪ್ರಯಾಣಿಕರ ಸಂಖ್ಯೆಗನುಗುಣವಾಗಿ ಬಸ್ಸುಗಳ ಸಂಖ್ಯೆಯನ್ನು ಜಾಸ್ತಿ ಮಾಡಬೇಕಾದ ಕೆಲಸವನ್ನು ಈ ಕೂಡಲೇ ಮಾಡಬೇಕು ಇಲ್ಲದೆ ಹೋದಲ್ಲಿ ಆಮ್ ಆದ್ಮಿ ಪಕ್ಷವು ಕರ್ನಾಟಕ ಸರ್ಕಾರದ ವಿರುದ್ಧ ಅನಿವಾರ್ಯವಾಗಿ ಹೋರಾಟ ಮಾಡಬೇಕಾಗುತ್ತದೆ.

## ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ಕೊಪ್ಪಳ: ಕನಕಗಿರಿ ಪಟ್ಟಣ ಪಂಚಾಯತಿಯಿಂದ 2022–23ನೇ ಸಾಲಿಗೆ ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಫ್.ಸಿ. ಶೇ 24.10, 5.00 & 7.25 ರ ಯೋಜನೆಯಡಿಯಲ್ಲಿ ಪಟ್ಟಣ ಪಂಚಾಯತ ವ್ಯಾಪ್ತಿಯ ಶ್ರವಣ ದೋಷ ವಿಕಲಚೇತನರಿಗೆ ಹಿಯರಿಂಗ್ ಮಷೀನ್ ನೀಡುವುದು, ವಿಕಲಚೇತನ ಮಹಿಳೆಯರಿಗೆ ಸ್ವಾವಲಂಬನೆ ಹೊಂದಲು ಬಟ್ಟೆ ಹೊಲಿಗೆ ಯಂತ್ರ ನೀಡುವುದು ಹಾಗೂ ಕನಕಗಿರಿ ಪಟ್ಟಣದ ಇತರೆ ಹಿಂದುಳಿದ ವರ್ಗದವರಿಗೆ, ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡ ವರ್ಗದ ಜನರಿಗೆ ವೈಯಕ್ತಿಕ ಸೋಲಾರ್ ವಿದ್ಯುತ್ ದೀಪಗಳನ್ನು ಕೊಡಿಸುವ ಯೋಜನೆಗಳಿದ್ದು ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ. ಕನಕಗಿರಿ ಪಟ್ಟಣದ ಅರ್ಹ ಸಾರ್ವಜನಿಕರು ತಮ್ಮ ಆಧಾರ್ ಪ್ರತಿ, ಜಾತಿ & ಆದಾಯ, ವಾಸಸ್ಥಳ ಪ್ರಮಾಣ ಪತ್ರ, ಭಾವ ಚಿತ್ರ, ವಿಕಲಚೇತನ ಅರ್ಜಿದಾರರಾಗಿದ್ದರೆ ಅಂಗವಿಕಲರ ಪ್ರಮಾಣ ಪತ್ರ, ಈ ಎಲ್ಲಾ ಸೂಕ್ತ ದಾಖಲಾತಿಗಳೊಂದಿಗೆ ಪಟ್ಟಣ ಪಂಚಾಯತ ಕಚೇರಿಗೆ ಜೂನ್ 14ರ ಸಂಜೆ 4.30ರೊಳಗೆ ಅರ್ಜಿ ಸಲ್ಲಿಸಬೇಕು ಎಂದು ಕನಕಗಿರಿ ಪ.ಪಂ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಡಿಪಿ ಸಭೆಯಲ್ಲಿ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡ: ಶಾಸಕ ಬಿ ಎನ್ ರವಿಕುಮಾರ್




ಶಿಡ್ಲಘಟ್ಟ: ವಿಧಾನ ಸಭಾ ಕ್ಷೇತ್ರದ ಜನರಿಗೆ ಕೊಟ್ಟ ಭರವಸೆಯಂತೆ ಅಭಿವೃದ್ಧಿ ಪಥದಲ್ಲಿ ನೆಡೆಯುವುದು ನನ್ನ ಮುಖ್ಯ ಕರ್ತವ್ಯ ಮತ್ತು ನಿರ್ಭಿತಿಯಿಂದ ಯಾವುದೇ ಮಧ್ಯವರ್ತಿಗಳ ಒತ್ತಡಕ್ಕೆ ಮಣಿಯದೆ ಅಧಿಕಾರಿಗಳು ಕಾನೂನಿನ ಚೌಕಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕು ಎಂದು ಶಾಸಕ ಬಿ.ಎನ್.ರವಿಕುಮಾರ್ ಹೇಳಿದರು.

ಶಿಡ್ಲಘಟ್ಟ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಪ್ರಪ್ರಥಮ ಕೆ ಡಿ ಪಿ ಸಭೆಯನ್ನು ಕರೆದಿದ್ದು. ಸುಮಾರು 34 ಇಲಾಖೆಯ ಅಧಿಕಾರಿಗಳು ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಆಯಾ ಇಲಾಖೆಗೆ ಸಂಬಂಧಪಟ್ಟಂತಹ ಕಾಮಗಾರಿಗಳು, ಅನುದಾನಗಳು, ಮತ್ತು ಇಲಾಖೆಯ ಅವ್ಯವಸ್ಥೆಯ ಕುರಿತು ಸಂಪೂರ್ಣವಾಗಿ ಚರ್ಚೆ ಮಾಡಿದರು.

ಆರೋಗ್ಯ ಇಲಾಖೆಗೆ ಸಂಬಂಧಪಟ್ಟಂತ ಕೆಲವೊಂದು ವಿಚಾರಗಳನ್ನು ಕುಲಂಕುಶವಾಗಿ ಚರ್ಚಿಸಿದರು. ಮಹಿಳಾ ಮತ್ತು ಮಕ್ಕಳ ಇಲಾಖೆಗೆ ಸಂಬಂಧಪಟ್ಟಂತ ಅಂಗನವಾಡಿ ಕೇಂದ್ರಗಳ, ಸಿಬ್ಬಂದಿ ಮತ್ತು ನೇಮಕಾತಿಗಳ ಬಗ್ಗೆ, ಕೃಷಿ ಇಲಾಖೆಗೆ ಸಂಬಂಧಪಟ್ಟಂತ ರಸ ಗೊಬ್ಬರಗಳಿಗೆ ಮತ್ತು ಕೃಷಿ ಸಲಕರಣೆಗಳು ಸಬ್ಸಿಡಿ , ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ಪವತಿ ಖಾತೆಗಳು ದುರಸ್ಥಿ, ಕುರಿತು ತೋಟಗಾರಿಕೆ ಇಲಾಖೆಯ ಅಂಕಿ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

ರೇಷ್ಮೆ ಮಾರುಕಟ್ಟೆಗೆ ಸುಮಾರು 15 ಎಕರೆ ಜಮೀನು ಅವಶ್ಯಕತೆ ಇದೆ ಎಂದು ಮಾರುಕಟ್ಟೆ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಸಿದ ದಂಡಾಧಿಕಾರಿಗಳು ಸರ್ಕಾರಿ ಜಾಗವನ್ನು ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳಲು ಹೇಳಿದರು. ಕಾರ್ಮಿಕ ಇಲಾಖೆಯಲ್ಲಿ ಗಾರೆ ಕೆಲಸ, ಪೈಂಟರ್, ಕಾರ್ಪೆಂಟರ್ ಕೆಲವು ಸೀಮಿತ ಹುದ್ದೆಗಳಿಗೆ ಮಾತ್ರ ಸರ್ಕಾರದ ಸೌಲಭ್ಯ ಲಭ್ಯವಿರುತ್ತದೆ. ಆದರೆ ಅಸಂಘಟಿತ ವಲಯದ ಕಾರ್ಮಿಕರಿಗೆ ತೀರಾ ಕಡಿಮೆ ಸೌಲಭ್ಯಗಳಿರುವುದು ಸಭೆಯಲ್ಲಿ ಚರ್ಚೆ ಆಯಿತು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ರೇಷನ್ ಕಾರ್ಡ್ ಗಳ ಕುರಿತು ಚರ್ಚೆ ಮಾಡಲಾಯಿತು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಸರ್ಕಾರಿ ಶಾಲೆಗಳಲ್ಲಿನ ಮಕ್ಕಳ ಸ್ಥಿತಿಗತಿ ಮತ್ತು ಮೂಲ ಸೌಲಭ್ಯಗಳ ಕುರಿತು ಸಭೆಯ ಮುಂದಿಟ್ಟರು ಇದೇ ರೀತಿಯಾಗಿ ಸಾರಿಗೆ ಇಲಾಖೆಯೂ ಸಹ ಸುಮಾರು 40 ಬಸುಗಳನ್ನು ಹೊಂದಿದ್ದು. ಸಮಯವಾರು ಜನರಿಗೆ ಸಾರಿಗೆ ಸಂಪರ್ಕ ವ್ಯವಸ್ಥೆಯ ಬಗ್ಗೆ ವರದಿ ನೀಡಿದರು. ಒಟ್ಟಾರೆ ಎಲ್ಲ ಇಲಾಖೆಗಳ ವರದಿಗಳನ್ನು ಪರಿಶೀಲಿಸಿ. ಆದಷ್ಟು ಬೇಗ ತೊಂದ್ರೆಯಾಗಿರುವ ವಲಯದಲ್ಲಿ ಪರಿಹಾರ ಕಂಡುಕೊಳ್ಳಲು ಅಧಿಕಾರಿಗಳಿಗೆ ಕಾರವಾಗಿ ಆದೇಶಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಆಡಳಿತ ಅಧಿಕಾರಿ ಆಶಾಲತಾ, ತಹಶೀಲ್ದಾರ್ ಬಿ ಎನ್ ಸ್ವಾಮಿ, ಕಾರ್ಯನಿರ್ವಾಹಕ ಅಧಿಕಾರಿ ಮುನಿರಾಜು, ನಗರಸಭೆ ಆಯುಕ್ತ ಶ್ರೀಕಾಂತ್, ವೃತ್ತ ನಿರೀಕ್ಷಕ ನಂದಕುಮಾರ್, ನರೇಗಾ ಸಹಾಯಕ ನಿರ್ದೇಶಕ ಚಂದ್ರಪ್ಪ, ಸೇರಿದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಬೆಳೆಯುವ ಪ್ರಮುಖ ಬೆಳೆ ಹಾಗೂ ಬೀಜೋಪಚಾರ ವಿಧಾನ



ಧಾರವಾಡ: 2023–24ನೇ ಸಾಲಿನಲ್ಲಿ ಜಿಲ್ಲೆಯ ಮುಂಗಾರು ಹಂಗಾಮಿನಲ್ಲಿ ರೈತರು ಬಿತ್ತನೆ ಪೂರ್ವದಲ್ಲಿ ಕೃಷಿ ವಿಶ್ವವಿದ್ಯಾಲಯ ಧಾರವಾಡದಿಂದ ವಲಯವಾರು ಸೂಚಿಸಿರುವ ರೋಗ ಹಾಗೂ ಬರ ನಿರೋದಕ ಸೂಕ್ತ ತಳಿಗಳ ಬೀಜಗಳನ್ನು ಆಯ್ಕೆಮಾಡಿಕೊಳ್ಳಬೇಕು. ಬಿತ್ತುವ ಮೊದಲು ರೈತರು, ಬೀಜ ಹಾಗೂ ಮಣ್ಣಿನಿಂದ ಬರಬಹುದಾದ ರೋಗ ಹತೋಟಿ ಮಾಡಲು ಬೀಜೋಪಚಾರ ಕಡ್ಡಾಯವಾಗಿ ಮಾಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ಬಿತ್ತನೆ ಪೂರ್ವದಲ್ಲಿ ಬೀಜೋಪಚಾರ ಹಾಗೂ ಬರ ನಿರೋಧಕ ಸೂಕ್ತ ತಳಿಗಳನ್ನು ಆಯ್ಕೆ ಮಾಡಿಕೊಂಡು ಬಿತ್ತನೆ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಬೆಳೆಯುವ ಪ್ರಮುಖ ಬೆಳೆ ಹಾಗೂ ಬೀಜೋಪಚಾರ ವಿಧಾನಗಳು:*

**ಗೋವಿನ ಜೋಳ: ಉರಿಜಿಂಗಿ ರೋಗಕ್ಕೆ:** ಪ್ರತಿ ಕೆ.ಗ್ರಾಂ ಬೀಜಕ್ಕೆ 25 ಗ್ರಾಂ ಅರ್ಘೋಸ್ಪಿರಿಲ್ಲಂ (ಎಸಿಡಿ 15 ಅಥವಾ ಎಸಿಡಿ 20 ತಳಿ) ಹಾಗೂ 6 ಗ್ರಾಂ. ಟ್ರೈಕೊಡರ್ಮಾ ಹಾರ್ಜಿಯಾನಮ್ ಶಿಲೀದ್ರದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು.

**ಕೇದಿಗೆ ರೋಗಕ್ಕೆ:** ಬಿತ್ತನೆಯ ಬೀಜವನ್ನು ಪ್ರತಿ ಕಿ. ಗ್ರಾಂ ಬೀಜಕ್ಕೆ 2ಗ್ರಾಂ. ಮೆಟಲಾಕ್ಸಿಲ್ (4%)+ ಮ್ಯಾಂಕೊಜೆಬ್(64%) ಎಮ್.ಜೆಡ್ 72 ಡಬ್ಲ್ಯೂ.ಪಿ ಅಂತರವ್ಯಾಪಿ ಶಿಲೀಂಧ್ರನಾಶಕದಿಂದ ಉಪಚರಿಸಬೇಕು ಹಾಗೂ ರೋಗಗ್ರಸ್ಥ ಗಿಡಗಳನ್ನು ಬೇರುಸಹಿತ ಕಿತ್ತು ಸುಡಬೇಕು.

**ಸೋಯಾಅವರೆ, ಹೆಸರು, ಹಾಗೂ ಶೇಂಗಾ ಬೆಳೆಗಳಿಗೆ:** ಪ್ರತಿ ಕೆ.ಗ್ರಾಂ ಬಿತ್ತನೆ ಬೀಜವನ್ನು 3 ಗ್ರಾಮ ಥೈರಾಮ (75 WP) ಅಥವಾ ಕ್ಯಾಪ್ಟನ್ (80 WP) ಅಥವಾ ಕಾರ್ಬಾಕ್ಸಿನ್ ನಿಂದ (75 WP) ಉಪಚರಿಸಬೇಕು.

ನಂತರ 1 ಲೀ. ನೀರಿಗೆ 100 ಗ್ರಾಂ ಬೆಲ್ಲ ಹಾಕಿ ಕರಗಿಸಿ ಪಾಕವನ್ನು ತಯಾರಿಸಿಕೊಳ್ಳಬೇಕು, ಬಿತ್ತುವ ಬೀಜಗಳನ್ನು ಹರಡಿ ಅದರಮೇಲೆ ತಯಾರಿಸಿದ ಬೆಲ್ಲದ ಘಾಕವನ್ನು ಸರಿಯಾಗಿ ಎಲ್ಲ ಕಾಳುಗಳಿಗೆ ಹತ್ತುವಂತೆ ಸಿಂಪಡಿಸಿ 10 ಗ್ರಾಮ ಟ್ರೈಕೊಡ್ರಮಾ 10 ಗ್ರಾಂ ರೈಜೋಬಿಯಮ್ ಹಾಗೂ 10 ಗ್ರಾಂ ರಂಜಕ ಕರಗಿಸುವ ಅಣುಜೀವಿಯನ್ನು (PSB) ಬೀಜಕ್ಕೆ ಉಪಚರಿಸಿ ನೆರಳಿನಲ್ಲಿ ಒಣಗಿಸಿ ಬಿತ್ತಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಂಗಸಗೂರು ಕ್ಷೇತ್ರದ ಸಮಗ್ರ ಅಭಿವೃದ್ಧಿಯೇ ಶಾಸಕರ ಆದ್ಯತೆಯಾಗಲಿ

**ಪ್ರಜಾ ಸೇನೆ ಸುದ್ದಿ**



ಲಿಂಗಸಗೂರು: ತಾಲೂಕಿನಲ್ಲಿ ಬಿಗಿ ಹಿಡಿತ ಹೊಂದಿರುವ ವಜ್ಜಲ್ ಕುಟುಂಬ. ಕ್ಷೇತ್ರದ ಜನತೆ ಮೂರನೇ ಬಾರಿ ಮಾನಪ್ಪ ಡಿ ವಜ್ಜಲ್ ರವರನ್ನು ಶಾಸಕರನ್ನಾಗಿ ಆಯ್ಕೆ ಮಾಡಿದ್ದಾರೆ. ಪಟ್ಟಣ ಸೇರಿದಂತೆ ತಾಲೂಕಿನ ಹಲವಾರು ಸಮಸ್ಯೆಗಳಿಗೆ ಪರಿಹಾರ ಒದಗಿಸುವಲ್ಲಿ ನೂತನ ಶಾಸಕರು ಈ ಬಾರಿ ಬದ್ಧತೆ ಪ್ರದರ್ಶಿಸಲಿದ್ದಾರೆ. ಎಂದು ತಾಲೂಕಿನ ಜನರು ಬೆಟ್ಟದಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ.

ಪಟ್ಟಣದಲ್ಲಿ ಹೆಜ್ಜೆ ಹೆಜ್ಜೆಗೂ ಸಮಸ್ಯೆಗಳ ಸುರುಳಿ ಬಿಚ್ಚಿಕೊಳ್ಳುತ್ತವೆ. ತಾಲೂಕು ಕೇಂದ್ರವಾದರೂ ಸಹ ಮೂಲ ಸೌಕರ್ಯಗಳ ಕೊರತೆಯಿಂದ ಪಟ್ಟಣ ನರಳುತ್ತಿದೆ. ರಸ್ತೆ, ಕುಡಿಯುವ ನೀರು, ಒಳಚರಂಡಿ ಸ್ವಚ್ಛತೆ, ಆರೋಗ್ಯ,ನೈರ್ಮಲ್ಯ ಎಲ್ಲಾದರಲ್ಲೂ ಸುಧಾರಣೆ ಕಾಣಬೇಕಿದೆ. ಜನರು ಬಾರಿ ಭರವಸೆಯೊಂದಿಗೆ ನೂತನ ಶಾಸಕರನ್ನು ಆಯ್ಕೆ ಮಾಡಿದ್ದು. ಕ್ಷೇತ್ರದ ಅಭಿವೃದ್ಧಿಗೆ ಗರಿಷ್ಠ ಪ್ರಯತ್ನ ಮಾಡಬೇಕು ಎಂಬುದು ಜನರ ಒತ್ತಾಸೆಯಾಗಿದೆ.

ಪಟ್ಟಣದಲ್ಲಿ ಬೀದಿ ದೀಪಗಳ ವ್ಯವಸ್ಥೆ, ಅದ್ವಾನದಿಂದ ಕೂಡಿದೆ. ರಾತ್ರಿ ವೇಳೆ ರಸ್ತೆ ಬದಿಯಲ್ಲಿ ನಡೆಯುವುದು ಪಾದಚಾರಿಗಳಿಗೆ ದುಸ್ತರವಾಗಿದೆ. ನಗರ ಬಡಾವಣೆಯಲ್ಲಿ ರಾತ್ರಿ ವೇಳೆ ಓಡಾಡುವುದೇ ಕಷ್ಟವಾಗಿದ್ದು. ಚರಂಡಿಗಳು ಕಟ್ಟಿಕೊಂಡಿದ್ದು ಸಣ್ಣ ಮಳೆಯಾದರೂ ಕೊಳಚೆ ಎಲ್ಲವೂ ರಸ್ತೆಗೆ ಬಂದು ಬೀಳುತ್ತದೆ.

ಹಾಗಾಗಿ ಪಟ್ಟಣ ಕರಡಕಲ್ ಕಸಬಾ ಲಿಂಗಸ್ಗೂರು ಸೇರಿದ 23 ವಾರ್ಡ್ ಗಳ ಪ್ರಮುಖ ಚರಂಡಿ ಹಾಗೂ ಬೀದಿ ದೀಪ ಸಿಸಿ ಕ್ಯಾಮೆರಾಗಳ ವ್ಯವಸ್ಥೆ ಸರಿಪಡಿಸಲು ಕ್ರಮವಹಿಸಬೇಕು ಎಂಬುದು ಜನರ ಆಗ್ರಹವಾಗಿದೆ.

ಗ್ರಾಮೀಣ ರಸ್ತೆಗಳ ದುರಸ್ತಿ ಕೆರೆಗಳ ಅಭಿವೃದ್ಧಿ ಹಳ್ಳ –ಕೊಳ್ಳಗಳ ಹೂಳೆತ್ತಿಸುವ ಮೂಲಕ ಜಲ ಮೂಲಗಳ ಅಭಿವೃದ್ಧಿಗೆ ಒತ್ತು ನೀಡಬೇಕು. ಕ್ಷೇತ್ರದಾದ್ಯಂತ ನೀರಾವರಿಗೆ ಮೊದಲ ಆದ್ಯತೆ ನೀಡಬೇಕು ಎಂಬುದು ಜನರ ಒತ್ತಾಸೆಯಾಗಿದೆ. ಚುನಾವಣೆ ಸಂದರ್ಭದಲ್ಲಿ ಶಾಸಕರಾದ ಬಳಿಕ ನಿಶ್ಚಿತವಾಗಿ ಈಡೇರಿಸುವ ಕೆಲ ಭರವಸೆಗಳನ್ನು ನೀಡಿದ್ದು, ಅವುಗಳ ಕಾರ್ಯ ಪಾಲನೆಗೆ ಬರುವ ದಿನಗಳಲ್ಲಿ ಶಾಸಕರು ಮುಂದಾಗಬಹುದು ಎಂಬುದು ಜನರಲ್ಲಿ ಮೂಡಿದೆ.

ಕೊಟ್ಟ ಭರವಸೆಗಳು : ಮುದಗಲ್ ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಘೋಷಣೆ. ಮುದಗಲ್ ಕೋಟೆ ಉತ್ಸವ ಪ್ರತಿ ವರ್ಷ ನೆರವೇರಿಸುವುದು. ನಂದವಾಡಗಿ ಏತ ನೀರಾವರಿ ಯೋಜನೆ ಬಾಕಿ ಉಳಿದ 35 ಹಳ್ಳಿಗಳನ್ನು ಸಂಪೂರ್ಣವಾಗಿ ನೀರಾವರಿ ಮಾಡುವುದು.

ಪಟ್ಟಣದಲ್ಲಿ ಗಾರ್ಮೆಂಟ್ ತೆರೆದು 2000 ಮಹಿಳೆಯರಿಗೆ ಉದ್ಯೋಗ ಕಲ್ಪಿಸುವುದು. ಗುಡ್ಡ ಗಾಡು ಪ್ರದೇಶದ ಪ್ರೌಢಶಾಲೆಗಳಿಗೆ ವಿಶೇಷವಾಗಿ ಬಾಲಕಿಯರಿಗೆ ವಸತಿ ನಿಲಯಗಳನ್ನು ಪ್ರಾರಂಭಿಸುವುದು.

ರೈತರ ಪಂಪ್ ಸೆಟ್ ಗಳಿಗೆ ಸತತ 7ರಿಂದ 8 ತಾಸು ವಿದ್ಯುತ್ ಒದಗಿಸುವುದು. ಪಟ್ಟಣದ ಪ್ರತಿ ಮನೆಗೂ ನಿರಂತರ 24ಸ7 ಶುದ್ಧ ಕುಡಿಯುವ ನೀರು ಸರಬರಾಜು ಮಾಡುವುದು.

ಪ್ರತಿ ಮನೆಗೂ 24 ಗಂಟೆ ವಿದ್ಯುತ್ ಪೂರೈಕೆ ಮಾಡುವುದು.ಪ್ರತಿ ಹಳ್ಳಿ –ತಾಂಡಕ್ಕೂ ರಸ್ತೆ ಸಂಪರ್ಕ ಕಲ್ಪಿಸುವುದು. ಗುರುಗುಂಟ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡುವುದು ಸೇರಿದಂತೆ ಕ್ಷೇತ್ರದ ಎಲ್ಲರಿಗೂ ಉದ್ಯೋಗ ಶಾಸಕರಾದ ಬಳಿಕ ಕ್ಷೇತ್ರದ ಜನರಿಗೆ ಮಾಡಿಕೊಡುವುದಾಗಿ ಮಾನಪ್ಪ ವಜ್ಜಲ್ ಚುನಾವಣಾ ಸಮಾರಂಭದಲ್ಲಿ ಜನರಿಗೆ ಕೊಟ್ಟ ನಿಶ್ಚಿತ ಭರವಸೆಗಳು. ತಾಲೂಕಿನಲ್ಲಿ ಶಿಕ್ಷಣ ಕ್ಷೇತ್ರ, ನೀರಾವರಿ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಯೋಜನೆಗಳನ್ನು ರೂಪಿಸಿ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ರೈತಾಪಿ ಕುಟುಂಬಗಳಿಗೆ ಅನುಕೂಲ ಮಾಡಿಕೊಡಬೇಕು ಎಂಬುದು ಜನರ ಆಶಯವಾಗಿದೆ.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಜೆಪಿ ನೆಲಕಚ್ಚಿದ್ದರೂ ಅದರ ಮಧ್ಯೆ ಮಾನಪ್ಪ ವಜ್ಜಲ್ ಮೀಸಲು ಲಿಂಗಸ್ಗೂರು ಕ್ಷೇತ್ರದಲ್ಲಿ ಕಮಲ ಅರಳಿಸಿ ಜನ ಮೆಚ್ಚುಗೆ ಪಡೆದ ಶಾಸಕ ಎನಿಸಿಕೊಂಡಿದ್ದಾರೆ. ಕಲ್ಯಾಣ ಕರ್ನಾಟಕದಲ್ಲಿಯೇ ಶಿಕ್ಷಣ ನೀರಾವರಿ ಸೌಲಭ್ಯಗಳಲ್ಲಿ ಅತ್ಯಂತ ಹಿಂದುಳಿದ ಕ್ಷೇತ್ರವಾದ ಲಿಂಗಸ್ಗೂರು ತಾಲೂಕಿನ ಸಮಗ್ರ ಅಭಿವೃದ್ಧಿಗೆ ಕ್ಷೇತ್ರದ ನೂತನ ಶಾಸಕ ಮಾನಪ್ಪ ಡಿ ವಜ್ಜಲ್ ಯಾವ ರೀತಿಯ ಕಾರ್ಯಯೋಜನೆ ರೂಪಿಸಲಿದ್ದಾರೆ. ಎಂಬುದು ಜನರಲ್ಲಿ ಸದ್ಯದ ಕುತೂಹಲವಾಗಿದೆ.

ಸ್ವಾತಂತ್ರ್ಯದ ಅಮೃತಮಹೋತ್ಸವ

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

G20 ONE EARTH • ONE FAMILY • ONE FUTURE



# 5 ನುಡಿದಂತೆ ನಡೆದಿದ್ದೇವೆ

ಈಡೇರಿದ ಐದು ಭರವಸೆ

## ಉಚಿತ ಈಗ 'ಖಚಿತ'

ಐದು ಗ್ಯಾರಂಟಿ ಯೋಜನೆಗಳನ್ನು ಸನ್ಮಾನ್ಯ ಮುಖ್ಯಮಂತ್ರಿ **ಶ್ರೀ ಸಿದ್ದರಾಮಯ್ಯ** ಅವರ ನೇತೃತ್ವದ ಸರ್ಕಾರ ಜಾರಿಗೆ ತಂದು ನುಡಿದಂತೆ ನಡೆದಿದೆ. ಸರ್ವಜನಾಂಗದ ಕಲ್ಯಾಣಕ್ಕಾಗಿ ಜಾರಿಗೊಳ್ಳಲಿರುವ ಈ ಯೋಜನೆಗಳು ನಾಡಿನ ಪ್ರತಿಯೊಂದು ಕುಟುಂಬದ ಸಂಕಷ್ಟಗಳ ಹೊರೆಯನ್ನು ತುಸು ಹಗುರಗೊಳಿಸಬಹುದೆಂಬ ನಿರೀಕ್ಷೆ ರಾಜ್ಯ ಸರ್ಕಾರದ್ದು. ಲಿಂಗ, ಜಾತಿ-ಧರ್ಮ, ಮತ ಬೇಧವಿಲ್ಲದೆ ರಾಜ್ಯದ ಎಲ್ಲಾ ಜನರಿಗೂ ಈ ಯೋಜನೆಗಳು ಅನ್ವಯ. ಅಧಿಕಾರಕ್ಕೆ ಬಂದ ತಿಂಗಳ ಒಳಗೆ ಇಷ್ಟೊಂದು ಯೋಜನೆಗಳನ್ನು ಜಾರಿಗೊಳಿಸಿ ಕರ್ನಾಟಕ ಸರ್ಕಾರ ಇತಿಹಾಸ ನಿರ್ಮಿಸಿದೆ. "ನುಡಿದಂತೆ ನಡೆದಿದ್ದೆವು, ನುಡಿದಂತೆ ನಡೆಯುವೆವು" ಇದು **ಕರ್ನಾಟಕ ಮಾದರಿ** ಆಡಳಿತ. ಈಗ ಇಡೀ ದೇಶ ಕರ್ನಾಟಕದ ಕಡೆ ಹೆಮ್ಮೆಯಿಂದ ನೋಡುತ್ತಿದೆ.



ಗ್ಯಾರಂಟಿ ಯೋಜನೆಗಳ ಜಾರಿ ಬಗ್ಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಸನ್ಮಾನ್ಯ ಮುಖ್ಯಮಂತ್ರಿ ಅವರೊಂದಿಗೆ ಮಾನ್ಯ ಉಪ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಮತ್ತು ಮಾನ್ಯ ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್ ಮತ್ತು ಸಚಿವ ಸಂಪುಟದ ಸದಸ್ಯರು ಭಾಗವಹಿಸಿರುವುದು.



### ಉಚಿತ ಪ್ರಯಾಣ ನಮ್ಮ ಪ್ರಮಾಣ

**ಮಹಿಳೆಯರಿಗೆ ಬಸ್ ಸಂಚಾರ ಉಚಿತ**

ವಿದ್ಯಾರ್ಥಿನಿಯರು ಮತ್ತು ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ರಾಜ್ಯದೊಳಗೆ 'ಶಕ್ತಿ' ಯೋಜನೆಯಡಿ ಉಚಿತ ಪ್ರಯಾಣಕ್ಕೆ ಜೂನ್ 11 ರಿಂದಲೇ ಅವಕಾಶ.



### ಅನ್ನಭಾಗ್ಯ

**10kg** ಬಡವರಿಗೆ ಪ್ರತಿ ತಿಂಗಳು ತಲಾ 10kg ಅಕ್ಕಿ ಉಚಿತ

ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿರುವ ಪ್ರತಿ ಕುಟುಂಬದ ಪ್ರತಿ ವ್ಯಕ್ತಿಗೆ, ಪ್ರತಿ ತಿಂಗಳು 10 ಕೆಜಿ ಅಕ್ಕಿ ಉಚಿತ ನೀಡುವ 'ಅನ್ನ ಭಾಗ್ಯ' ಯೋಜನೆ ಜುಲೈ 1 ರಿಂದ ಜಾರಿ.



### ಗೃಹಜ್ಯೋತಿ

**ನಿಮ್ಮ ಮನೆಗೆ 200 ಯೂನಿಟ್ ವಿದ್ಯುತ್ ಉಚಿತ**

ವಾರ್ಷಿಕ ಸರಾಸರಿ ಆಧಾರದ ಮೇಲೆ ಗರಿಷ್ಠ 200 ಯೂನಿಟ್ ವರೆಗೆ ಪ್ರತಿ ಮನೆಗೆ, ವಿದ್ಯುತ್ ಉಚಿತ ನೀಡುವ 'ಗೃಹಜ್ಯೋತಿ' ಯೋಜನೆ ಜುಲೈ 1 ರಿಂದ ಜಾರಿ.



### ಗೃಹಲಕ್ಷ್ಮಿ

**ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000**

ಬಿಪಿಎಲ್ ಮತ್ತು ಎಪಿಎಲ್ ಕುಟುಂಬದ ಮನೆಯೊಡತಿಗೆ ಪ್ರತಿ ತಿಂಗಳು 2000 ರೂ. ನೀಡುವ 'ಗೃಹಲಕ್ಷ್ಮಿ' ಯೋಜನೆ ಆಗಸ್ಟ್ 15 ರಿಂದ ಜಾರಿ.



### ಯುವನಿಧಿ

**ಪ್ರತಿ ತಿಂಗಳು ನಿರುದ್ಯೋಗ ಭತ್ಯೆ**

**₹3000** ಪದವೀಧರರಿಗೆ

**₹1500** ಡಿಪ್ಲೋಮಾ ಪದವೀಧರರಿಗೆ

2022-23 ರಲ್ಲಿ ಉತ್ತೀರ್ಣರಾದ ಪದವೀಧರ ನಿರುದ್ಯೋಗಿಗಳಿಗೆ 'ಯುವ ನಿಧಿ' ಯೋಜನೆಯಡಿ ಪ್ರತಿ ಮಾಹೆ 3000 ರೂ. ಮತ್ತು ಡಿಪ್ಲೋಮಾದಾರರಿಗೆ 1500 ರೂ. ನಂತೆ 24 ತಿಂಗಳು ನಿರುದ್ಯೋಗ ಭತ್ಯೆ.

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
–ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089

# ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಯೋಜನೆಯಡಿ ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿನ ಬೆಳಗಾವಿ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (MGNREGA) ಯೋಜನೆಯಡಿಯಲ್ಲಿ ಮಾವು, ಚಿಕ್ಕು, ಗೋಡಂಬಿ, ಬಾಳೆ, ಪಪಾಯಿ, ತೆಂಗು, ಪೇರಲ, ನುಗ್ಗೆ, ಸೀತಾಫಲ, ಕರಿಬೇವು, ಗುಲಾಬಿ ಹಾಗೂ ಇತರೆ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳು, ಅಪ್ರಧಾನ ಹಣ್ಣುಗಳು, ಸಾಂಬಾರು ಬೆಳೆಗಳ ಪ್ರದೇಶ ವಿಸ್ತರಣೆ ಕಾರ್ಯಕ್ರಮ, ಹನಿ ನೀರಾವರಿ ಯೋಜನೆ ಒಗ್ಗೂಡಿಸುವಿಕೆಯ ಕಾರ್ಯಕ್ರಮಗಳಿಗೆ ಅವಕಾಶ ಇರುತ್ತದೆ ಆದ್ದರಿಂದ ನೀರಾವರಿ ಸೌಲಭ್ಯವನ್ನು ಹೊಂದಿದ ಮತ್ತು ಗ್ರಾಮ ಪಂಚಾಯತಿಯಲ್ಲಿ ನೊಂದಣಿ ಮಾಡಿಕೊಂಡು ಜಾಬ್ ಕಾರ್ಡ ಹೊಂದಿರುವ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಣ್ಣ, ಅತಿ ಸಣ್ಣ, ಮಹಿಳಾ ಪ್ರಧಾನ ರೈತರು ಮತ್ತು ಬಿಪಿಎಲ್ ಕಾರ್ಡ ಹೊಂದಿದ ಆಸಕ್ತ ರೈತರು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ತೋಟಗಾರಿಕೆ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು (ಜಿ.ಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿವ ಪ್ರತಿಷ್ಠಾನ ಹಿಂದೂಸ್ತಾನ್ ವತಿಯಿಂದ ಶಿವ ರಾಜ್ಯಾಭಿಷೇಕ ಆಚರಣೆ

ಬೆಳಗಾವಿಯ ಶಿವ ಪ್ರತಿಷ್ಠಾನ ಹಿಂದೂಸ್ಥಾನದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ 'ಜ್ಯೇಷ್ಠ ಶುದ್ಧ ತ್ರಯೋದಶಿ ಶಕೆ 1945' ಹಿಂದೂ ತಿಥಿಯ ಪ್ರಯುಕ್ತ ಶಿವ ರಾಜ್ಯಾಭಿಷೇಕ ದಿನಾಚರಣೆಯನ್ನು ಶಿವಪ್ರೇಮಿಗಳ ಉತ್ಸಾಹದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

ಛತ್ರಪತಿ ಶಿವಾಜಿ ಮಹಾರಾಜ ಉದ್ಯಾನದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ವಿಗ್ರಹಕ್ಕೆ ಪ್ರೇರಣಾ ಮಂತ್ರದಿಂದ ಆರಂಭವಾಗಿ ಹಾಲಿನಅಭಿಷೇಕ ಮತ್ತು ಜಲಾಭಿಷೇಕವನ್ನು ವಿಧಿವತ್ತಾಗಿ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾದ ದೀಪಕ ಪವಾರ ಹಾಗೂ ಶ್ರೀ ಶಿವಪ್ರತಿಷ್ಠಾನ ಹಿಂದೂಸ್ಥಾನದ ಜಿಲ್ಲಾಧ್ಯಕ್ಷ ವಿಶ್ವನಾಥ ಪಾಟೀಲ ಅವರು ಶಿವನ ಮೂರ್ತಿಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿದರು.



ನಂತರ ದೇವದರ್ಶನ ಯಾತ್ರೆ ಆರಂಭವಾಯಿತು. ಈ ಸಂದರ್ಭದಲ್ಲಿ ಹರಿಭಕ್ತ ಪಾರಾಯಣ ಕೀರ್ತನಕರ ಬಾಳು ಭಕ್ತಿಕರ ಮಹಾರಾಜರಿಂದ ಪಲ್ಲಕ್ಕಿಯಲ್ಲಿ ಮೂರ್ತಿ ಹಾಗೂ ಗ್ರಂಥಗಳನ್ನು ಪ್ರತಿಷ್ಠಾಪಿಸಲಾಯಿತು. ಪ್ರಾಂತೀಯ ಮುಖ್ಯಾಧಿಕಾರಿ ಕಿರಣಬಾಪು ಗಾವಡೆಯವರ ಪರವಾಗಿ ಪಾಲ್ಕಿ ಪೂಜೆ ನೆರವೇರಿಸಲಾಯಿತು.

ಧ್ವಜಾರೋಹಣಕ್ಕೆ ರಮಾಕಾಂತ್ ಕೊಂಡುಸ್ಕರ್ ಹಾಗೂ ಕಾರ್ಪೊರೇಟರ್ ರವಿ ಸಾಳುಂಕೆ ಪೂಜೆ ಸಲ್ಲಿಸಿದರು. ಬಳಿಕ ದೇವದರ್ಶನ ಯಾತ್ರೆ ಆರಂಭವಾಯಿತು. ಈ ದೇವದರ್ಶನ ಯಾತ್ರೆಯಲ್ಲಿ, ಆರಂಭದಲ್ಲಿ ಧ್ವಜ ತಂಡವು ಹೊಂಗೆಯ ಶ್ರೀ ಶಿವಪ್ರತಿಷ್ಠಾನ ಹಿಂದೂಸ್ಥಾನ ಲಜೀಮ್ ತಂಡವು ಭಾಗವಹಿಸಿದ್ದವು.

ಸಾವಗಾಂವ್ನ ವಾರಕರಿ ಪಂಥದ ವತಿಯಿಂದ ಯಾತ್ರೆಯಲ್ಲಿ ಭಜನೆ ಕೀರ್ತನೆ ನಡೆಯಿತು. ಈ ಮೆರವಣಿಗೆಯಲ್ಲಿ ಬಾಲ್ಹಾಮು ಅವರ ಪೌರುಷದ ಆಟಗಳಾದ ಲಾಠಿ–ಕತ್ತಿ, ದಂಡಾಪಟ್ಟಿಗಳನ್ನು ಪ್ರದರ್ಶಿಸಲಾಯಿತು. ಶ್ರೀ ಶಿವಾಜಿ ಉದ್ಯಾನದಿಂದ ಕಪಿಲೇಶ್ವರ ದೇವಸ್ಥಾನದವರೆಗೆ ಮೆರವಣಿಗೆ ಸಾಗಿತ್ತು.

ಅನೇಕ ಶಿವಭಕ್ತರು ಕುಂಕುಮವನ್ನು ಧರಿಸಿ ಉತ್ಸಾಹದಿಂದ ಭಾಗವಹಿಸಿದರು. ಮಹಿಳಾ ವರ್ಗದವರೂ ಭಾಗವಹಿಸಿದ್ದು ವಿಶೇಷವಾಗಿತ್ತು. ಅಂತಿಮವಾಗಿ ಈ ದೇವದರ್ಶನ ಯಾತ್ರೆಯು ಕಪಿಲೇಶ್ವರ ದೇವಸ್ಥಾನದಲ್ಲಿ ಮುಕ್ತಾಯವಾಯಿತು.

ಕಪಿಲೇಶ್ವರ ದೇವಸ್ಥಾನ ಟ್ರಸ್ಟ್ ವತಿಯಿಂದ ಪಾಲಿಕೆಯನ್ನು ಸ್ವಾಗತಿಸಲಾಯಿತು. ಕಪಿಲೇಶ್ವರ ದೇವಸ್ಥಾನದಲ್ಲಿ ಬಾಲು ಭಕ್ತಿಕರ ಮಹಾರಾಜರಿಂದ ಆರತಿ ನಡೆಯಿತು. ಶಿವನ ಪಟ್ಟಾಭಿಷೇಕ ದಿನವನ್ನು ಹಿಂದೂ ತಿಥಿಯ ಪ್ರಕಾರ ಆಚರಿಸಲಾಯಿತು.

ಛತ್ರಪತಿ ಶಿವಾಜಿ ಮಹಾರಾಜರು ಜ್ಯೇಷ್ಠ ಶುದ್ಧ ತ್ರಯೋದಶಿಯಂದು ದುರ್ಗರಾಜ್ ರಾಯಗಡದಲ್ಲಿ ಪಟ್ಟಾಭಿಷೇಕ ಮಾಡಿದರಂತೆ. ಅದಾದ ನಂತರ ಮಹಾರಾಜರು ದೇವದರ್ಶನಕ್ಕಾಗಿ ಜಗದೀಶ್ವರ ದೇವಾಲಯಕ್ಕೆ ತೆರಳಿದರು. ಅದೇ ರೀತಿ ಪೂಜ್ಯ ಭಿಡೆ ಗುರೂಜಿಯವರ ಮಾರ್ಗದರ್ಶನದಲ್ಲಿ ಶಿವರಾಜ್ಯ ಅಭಿಷೇಕ ದಿನದ ಪೂಜೆಯ ನಂತರ ಈ ದೇವದರ್ಶನ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕಾ ಕಾರ್ಯಾಧ್ಯಕ್ಷ ಕಲ್ಲಪ್ಪ ಪಾಟೀಲ ತಿಳಿಸಿದರು.

ಕಪಿಲೇಶ್ವರ ದೇವಸ್ಥಾನದಲ್ಲಿ ಮಹಾದೇವನಿಗೆ ಆರತಿ ಮಾಡಿ ಗುರಿ ಮಂತ್ರವಾಗಿ ಧ್ವಜಾರೋಹಣ ಮಾಡುವ ಮೂಲಕ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಲಾಯಿತು.

ಈ ಸಂದರ್ಭದಲ್ಲಿ ಎಲ್ಲ ಶಿವಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಅಲ್ಲದೆ ಕೆಲ ದಿನಗಳ ಹಿಂದೆ ಶಹಾಪುರದಲ್ಲಿ ಭಾರೀ ಮಳೆಗೆ ಕೇಸರಿ ಧ್ವಜ ಬಿದ್ದಾಗ ಮಳೆಯನ್ನೂ ಲೆಕ್ಕಿಸದೆ ಖಡ್ಕೇಕರ ಎಂಬ ಪುಟ್ಟ ಬಾಲಕ ಧ್ವಜವನ್ನು ಎತ್ತಿ ಹಿಡಿದು ಗೌರವಿಸಿದ್ದ.

ಈ ಸಂದರ್ಭದಲ್ಲಿ ನಗರ ಮುಖ್ಯಾಧಿಕಾರಿ ಅನಂತ ಚೌಗುಲೆ, ತಾ.ಪಂ ಮುಖ್ಯಾಧಿಕಾರಿ ಪರಾಶರಾಮ ಕೋಕಿಟಕರ, ವಡಗಾಂವ ಉಂಗೋಲ ವಿಭಾಗದ ಮುಖ್ಯಸ್ಥ ಪುಂಡ್ಲಿಕ್ ಚವ್ಹಾಣ, ಕಿರಣ ಬಡವನಾಚೆ, ಶೇಖರ ಪಾಟೀಲ ಹಾಗೂ ಎಲ್ಲಾ ತಾಲೂಕಾ ಮುಖ್ಯಸ್ಥರು ಹಾಗೂ ಇತರೆ ಶಿವಭಕ್ತರು, ಮಹಿಳಾ ವರ್ಗ ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಜಿಲ್ಲಾ ಯೋಜನಾ ಸಹಾಯಕರ ಒಂದು ಹುದ್ದೆಗೆ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿಯಲ್ಲಿ ಪೋಷಣ ಅಭಿಯಾನ ಯೋಜನೆಯಡಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಯೋಜನಾ ಸಹಾಯಕರ ಒಂದು ಹುದ್ದೆಯನ್ನು ನೇರಗುತ್ತಿಗೆ ಆಧಾರದ ಮೂಲಕ ತಾತ್ಕಾಲಿಕ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸ್ಥಳೀಯ ಪದವಿ, ಸಮಾಜ ವಿಜ್ಞಾನದಲ್ಲಿ ಪಿ.ಜಿ ಡಿಪ್ಲೋಮಾ, ಪೌಷ್ಠಿಕತೆಯಲ್ಲಿ ಪಿ.ಜಿ ಡಿಪ್ಲೋಮಾ, 2 ವರ್ಷ ಅನುಭವ ಹಾಗೂ ಕಂಪ್ಯೂಟರ ಜ್ಞಾನವುಳ್ಳ ಅಭ್ಯರ್ಥಿಗಳು ಜೂನ್ 5 ರಿಂದ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆಯನ್ನು ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಕಟ್ಟಡ, ಡಿ.ಸಿ. ಕಂಪೌಂಡ, ಧಾರವಾಡ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ಅರ್ಜಿಗಳನ್ನು ಪಡೆದು ಜೂನ್ 19 ರಂದು ಸಂಜೆ 5:30 ಗಂಟೆವರೆಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ 0836–2447850 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿ ಮನೆಯ ಜಗಲಿಯ ಮೇಲೆ ದೇವರ ಭಾವಚಿತ್ರ ಬದಲು ಸಂವಿಧಾನ ಗ್ರಂಥವಿತಬೇಕು: ಎಂ ಆರ್ ಬೇರಿ

ಮಾನವಿ : ಮನುವಾದಿಗಳ ಕುತಂತ್ರ ಬುದ್ಧಿಯಿಂದಾಗಿದ್ದ ವರ್ಣ ಭೇದ ನೀತಿ ಆಚರಣೆ ಸಮಾಜದಲ್ಲಿ ಆಳವಾಗಿ ಬೇರೂರಿರುವ ಜಾತಿ ಮತ್ತು ಅನಿಷ್ಠ ಪದ್ಧತಿಗಳನ್ನು ಕಿತ್ತೊಗೆಯಲು ಪತ್ರಿಕೋದ್ಯಮವನ್ನು ಪ್ರಾರಂಭಿಸಿ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ವಂಚನೆಗೊಳಗಾಗಿದ್ದ ಅಸ್ಪೃಶ್ಯ ಮತ್ತು ಶೋಷಿತ ಸಮುದಾಯಗಳ ಏಳಿಗೆಗೆ ಶ್ರಮಿಸಿದ ಮಹಾನ್ ಮಾನವತಾವಾದಿ ಅಂಬೇಡ್ಕರರವರು ವಿಶ್ವ ಕಂಡ ಶ್ರೇಷ್ಠ ಪತ್ರಕರ್ತರಾಗಿದ್ದರು ಎಂದು ಶಿಕ್ಷಕ ಹಾಗೂ ಪತ್ರಕರ್ತರಾದ ಗೋವಿಂದ ರಾಜು ಮಾನವಿ ಅಭಿಪ್ರಾಯ ವ್ಯಕ್ತಪಡಿಸಿದರು,

ಮಾನ್ವಿ ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ನಗರದ ಸುಜಾತ–ಯಮುನಪ್ಪ ಜಾಗೀರ್ ಪನ್ನೂರ್ ಇವರ ಮನೆಯಲ್ಲಿ ಬಹುಜನ ಸಂಘರ್ಷ ಸಮಿತಿ ರಾಯಚೂರು ಇವರ ವತಿಯಿಂದ ಆಯೋಜಿಸಿದ್ದ 60ನೇ ಮನೆ–ಮನೆಗೆ ಅಂಬೇಡ್ಕರ್ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದ ಸಿರವಾರ ತಾಲೂಕ ಪಶುಸಂಗೋಪನ ಇಲಾಖೆ ಸಹಾಯಕ ನಿರ್ದೇಶಕ ಡಾ.ರಾಜು ಕಾಂಬ್ಳೆ ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಮಹಿಳೆಯರಿಗೆ ತಂದೆಯ ಆಸ್ತಿಯಲ್ಲಿ ಪಾಲು, ವಿಧವೆಯರಿಗೆ ಮರು ವಿವಾಹ ಇನ್ನಿತರ ಹಕ್ಕುಗಳು ಸೇರಿದಂತೆ



ಸಂಪೂರ್ಣ ಅಭಿವೃದ್ಧಿಗಾಗಿ ಹಿಂದೂ ಕೋಡ್ ಬಿಲ್ ನ್ನು ಸಂಸತ್ತಿನಲ್ಲಿ ಮಂಡಿಸಿದ್ದರು ಅದು ಜಾರಿಯಾಗದ ಕಾರಣ ಮಂತ್ರಿಸ್ಥಾನಕ್ಕೆ ರಾಜಿನಾಮೆ ನೀಡಿರುವುದು ಬಾ ಬಾ ಸಾಹೇಬ್ ಅಂಬೇಡ್ಕರ್ ಅವರ ಅಪಾರವಾದ ಸಾಮಾಜಿಕ ಕಳಕಳಿಗೆ ಸಾಕ್ಷಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಮಾತನಾಡಿದ ಬಹುಜನ ಸಂಘರ್ಷ ಸಮಿತಿ ಅಧ್ಯಕ್ಷ ಜೆ.ಶರಣಪ್ಪ ಬಲ್ಲಟಗಿ ಬಹುಜನ ಸಂಘರ್ಷ ಸಮಿತಿಯ ಮಹಾಪೋಷಕರು, ಹಿರಿಯ ಹೋರಾಟಗಾರರಾದ ಎಂ.ಆರ್.ಭೇರಿ ಮಾತನಾಡಿ ನೂರಾರು ವರ್ಷಗಳಿಂದ ತುಳಿತಕ್ಕೆ ಒಳಪಟ್ಟ ಜನರ ಒಳಿತಿಯಾಗಿ ಹೋರಾಡಿ ನ್ಯಾಯ ಒದಗಿಸಿಕೊಟ್ಟ ಮಹಾನ್ ವ್ಯಕ್ತಿಗಳ ತಿರುಳನ್ನು ಅರಿಯದ ಜನ ಅವರ ವಿಚಾರಧಾರೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳದೆ ಮಹಾನ್ ವ್ಯಕ್ತಿಗಳ ಸರ್ಕಲ್ ಹಾಗೂ ಮೂರ್ತಿಗಳನ್ನು ನಿರ್ಮಾಣ ಮಾಡಿ ಅದೇ ಬೀದಿಯಲ್ಲಿ ನಿಲ್ಲಿಸಿ ಜನ್ಮ ದಿನಾಚರಣೆಯನ್ನು ಆಚರಿಸುವ ಬದಲು ತಮ್ಮ ಮನೆಯ ಜಗಲಿಯ ಮೇಲಿರುವ ದೇವರುಗಳ ಜಾಗದಲ್ಲಿ ಇಂತಹ ಸಮಾಜ ಸುಧಾರಕರ ಗ್ರಂಥಗಳುವಿರಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪಾಮನಕಲ್ಲೂರು ನಾಡಕಛೇರಿಯ ಉಪ ತಾಸಿಲ್ದಾರ್ ದೇವರಾಜ ಅಧ್ಯಕ್ಷತೆಯನ್ನು ವಹಿಸಿದ್ದರು ಅದೇ ರೀತಿ ಭಾರತೀಯ ದಲಿತ ಪ್ಯಾಂಥರ್ ರಾಯಚೂರು ಜಿಲ್ಲಾಧ್ಯಕ್ಷ ಲಕ್ಷ್ಮಣ ಜಾನೇಕಲ್ ನಿರೂಪಿಸಿ, ವಂದಿಸಿದರು.

ಈ ಸಂದರ್ಭದಲ್ಲಿ ವರದಿಗಾರರು ದುರುಗಪ್ಪ ಸಾದಾಪೂರ, ಶ್ರಾವಣಕುಮಾರ್ ಮಾನ್ವಿ, ಸೀತಮ್ಮ, ಲಾಜರ್ ಮಾನ್ವಿ, ಕೃಪಾವತಿ ನಾಗರಾಜ ಮಾನ್ವಿ, ಸಿದ್ಧಪ್ಪ ಯಡಿವಾಳ, ಹಾಗೂ ಮಹಿಳೆಯರು, ಮಕ್ಕಳು ಸೇರಿದಂತೆ ಅನೇಕ ಜನರು ಉಪಸ್ಥಿತರಿದ್ದರು.

# ಹುಕ್ಕೇರಿಯಲ್ಲಿ ನೂತನ ಮಹಾವೀರ ಅರ್ಬನ್ ಸೊಸೈಟಿ ಉದ್ಘಾಟನೆ



ಹುಕ್ಕೇರಿ: ಸಹಕಾರಿ ಕ್ಷೇತ್ರದಲ್ಲಿ ಉತ್ತುಂಗ ಸಾಧನೆ ಮಾಡಲು ಆಡಳಿತ ಮಂಡಳಿ ಜೊತೆಗೆ ಸದಸ್ಯ–ಗ್ರಾಹಕರ ಸಹಕಾರ ಮುಖ್ಯವಾಗಿದೆ ಎಂದು ಕ್ಯಾರಗುಡ್ ಅವುಜಿಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಪಟ್ಟಣದ ಹಳೆ ಬಸ್‌ನಿಲ್ದಾಣ ಬಳಿಯ ಖತಗಲ್ಲಿ ಕಾಂಪ್ಲೆಕ್ಸ್‌ಲ್ಲಿ ಶುಕ್ರವಾರ ಹೊಸದಾಗಿ ಆರಂಭವಾದ ಮಹಾವೀರ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸೈಟಿ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರ ಏಳಿಗೆಯಲ್ಲಿ ಪರಸ್ಪರರ ಸಹಕಾರವೇ ಪ್ರಮುಖ ಕಾರಣ ಎಂದರು.

ಸಹಕಾರಿ ಸಂಸ್ಥೆಗಳನ್ನು ಆರಂಭಿಸುವುದು ಸುಲಭ. ಆದರೆ, ಅವುಗಳನ್ನು ಮುನ್ನಡೆಸಿಕೊಂಡು ಹೋಗುವುದು ಇಂದಿನ ದಿನಗಳಲ್ಲಿ ಅತ್ಯಂತ ಕಷ್ಟದ ಕೆಲಸವಾಗಿದೆ. ನೂತನವಾಗಿ ಆರಂಭವಾದ ಈ ಮಹಾವೀರ ಅರ್ಬನ್ ಕ್ರೆಡಿಟ್ ಸೊಸೈಟಿಯು ಭವಿಷ್ಯದಲ್ಲಿ ಉತ್ತುಂಗ ಸ್ಥಾನ ಪಡೆಯುವಂತಾಗಬೇಕು. ಈ ಮೂಲಕ ಸಮಾಜದ ಪ್ರಗತಿಯಲ್ಲಿ ಸಂಸ್ಥೆ ತೊಡಗಿಸಿಕೊಳ್ಳಬೇಕು ಎಂದು ಅವರು ಸಲಹೆ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವೀರ ಸಮೂಹ ಸಂಸ್ಥೆ ಅಧ್ಯಕ್ಷ ಮಹಾವೀರ ನಿಲಜಗಿ ಮಾತನಾಡಿ, ಬೆಳಗಾವಿ ಜಿಲ್ಲೆ ವ್ಯಾಪ್ತಿಯಲ್ಲಿ ಈ ನೂತನ ಸಂಸ್ಥೆ ಕಾರ್ಯನಿರ್ವಹಿಸಲಿದೆ. ಸಹಕಾರಿ ಮೂಲಕ ಬೀದಿ ಬದಿ ವ್ಯಾಪಾರಿಗಳು, ಬಡ, ಮಧ್ಯಮ ವರ್ಗದವರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದರು.

# ರಾಜ್ಯಪಾಲರಿಂದ ಕೊಪ್ಪಳ ವಿಶ್ವವಿದ್ಯಾಲಯದ ಲಾಂಛನ ಅನಾವರಣ



ಕೊಪ್ಪಳ: ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಶುಕ್ರವಾರ ರಾಜಭವನದಲ್ಲಿ ಕೊಪ್ಪಳ ವಿಶ್ವವಿದ್ಯಾಲಯದ ಲಾಂಛನವನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಕೆ. ರವಿ, ಕೊಡಗು ವಿವಿ ಕುಲಪತಿ ಡಾ.ಅಶೋಕ್ ಆಲೂರ್, ಬಾಗಲಕೋಟೆ ವಿವಿ ಕುಲಪತಿ ಡಾ.ದೇಶಪಾಂಡೆ, ಚಾಮರಾಜನಗರ ವಿವಿ ಕುಲಪತಿ ಡಾ.ಗಂಗಾಧರ್, ಬೀದರ್ ವಿವಿ ಕುಲಪತಿ ಡಾ.ಬಿರಾದಾರ್, ಹಾಸನ ವಿವಿ ಕುಲಪತಿ ಡಾ. ತಾರಾನಾಥ್, ಹಾವೇರಿ ವಿವಿ ಕುಲಪತಿ ಡಾ.ಸುರೇಶ ಎಚ್.ಜಂಗಮಶೆಟ್ಟಿ ಉಪಸ್ಥಿತರಿದ್ದರು.

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಅಗತ್ಯ: ರವಿ ಬಾಬು ಚವ್ಹಾಣ

ಔರಾದ: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮತ್ತು ಬಾಲಕಾರ್ಮಿಕ ಯೋಜನೆ, ಪರಿವರ್ತನಾ ಸಮುದಾಯ ಅಭಿವೃದ್ಧಿ ಮತ್ತು ಜಾಗೃತಿ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನಾ ಅಭಿಯಾನ ಕಾರ್ಯಕ್ರಮದ ನಿಮಿತ್ಯಾ ಆಟೋ ಪ್ರಚಾರಕ್ಕೆ ಹಿರಿಯ ಸಿವಿಲ್ ನ್ಯಾಯಧಿಶರಾದ ರವಿ ಬಾಬು ಚವ್ಹಾಣರವರು ಹಸಿರು ಧ್ವಜ ತೋರಿಸಿ ಚಾಲನೆ ನೀಡಿ ಮಾತನಾಡಿದ ಅವರು ಯಾವುದೇ ಮಕ್ಕಳು ಗ್ಯಾರೇಜ್, ಹೋಟೆಲ್, ಕಾರ್ಖಾನೆ, ಯಾವುದೇ ಶಾಪ್‌ಗಳಲ್ಲಿ ಕೆಲಸಕ್ಕೆ ಹೋಗಬಾರದೆಂದು ತಿಳಿಸಿದರು.

ಶಿಕ್ಷಣ ಮಕ್ಕಳ ಮೂಲ ಹಕ್ಕಾಗಿದೆ. ಸಮಾಜದಲ್ಲಿ ಬಾಲಕಾರ್ಮಿಕರನ್ನು ಕಂಡರೆ ಅಂತವರನ್ನು ಗುರುತಿಸಿ ಶಾಲೆಗೆ ಸೇರಿಸುವುದು ಪ್ರತಿಯೊಬ್ಬರ ಕರ್ತವ್ಯ. ಮಕ್ಕಳು ಬಾಲ್ಯಜೀವನದಲ್ಲಿ ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳಬೇಕೆಂದರು.

ಸಮಾಜದಲ್ಲಿ ಎಲ್ಲರೂ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದಾಗ ಮಾತ್ರ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ. ಅದಕ್ಕಾಗಿ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ತಿಳಿಸಿದರು. ಸಿವಿಲ್ ನ್ಯಾಯಧಿಶರಾದ ವಿಜಯಕುಮಾರ್ ಬಾಗಡೆ ಮಾತನಾಡಿ

ಸ್ಪರ್ಧಾತ್ಮಕ ಜಗತ್ತಿನಲ್ಲಿ ಎಲ್ಲ ಪಾಲಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕಿದೆ. ಅಂದಾಗಲೇ ಅವರು ಕೂಡ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತದೆ.




ಒಂದು ವೇಳೆ ನಿಷ್ಕಾಳಜಿ ವಹಿಸಿದರೆ ವ್ಯತಿರಿಕ್ತವಾದ ಪರಿಣಾಮ ಬೀರುತ್ತದೆ ಎಂದು ಹೇಳಿದರು. ಮಕ್ಕಳಲ್ಲಿ ಅಗಾಧವಾದ ಪ್ರತಿಭೆ ಇರುತ್ತದೆ. ಇದನ್ನು ಗುರುತಿಸಿ ನಾವು ಪ್ರೋತ್ಸಾಹ ನೀಡಿದರೆ ಅವರ ಪ್ರತಿಭೆಯೂ ಸಮಾಜಕ್ಕೆ ಗೊತ್ತಾಗಲಿದೆ. ಹೀಗಾಗಿ ಮಕ್ಕಳ ಸಾಮರ್ಥ್ಯವನ್ನು ಸಮಾಜಕ್ಕೆ ಪರಿಚಯಿಸುವಂತಹ ಕೆಲಸ ಆಗಬೇಕಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಮಲ್ಲಿಕಾರ್ಜುನ ಮಾತನಾಡಿ ಬಾಲಕಾರ್ಮಿಕ ಮುಕ್ತ ತಾಲೂಕವನ್ನು ಮಾಡಲು ನಾವೆಲ್ಲರೂ ಸಂಕಲ್ಪ ತೆಗೆದುಕೊಂಡು ಬಾಲ ಕಾರ್ಮಿಕರು ಕಂಡಲ್ಲಿ 1098 ಗೆ ಕರೆ ಮಾಡಿ ಮಕ್ಕಳು ಭವಿಷ್ಯ ಉಜ್ವಲಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು ಪ್ರಚಾರಕ ರತ್ನದೀಪ್ ಕಸ್ತೂರೆ ಮಾತನಾಡಿ 14 ವರ್ಷದ ಒಳಗಿನ ಮಕ್ಕಳಿಗೆ ಕೆಲಸ ದುಡಿಸಿಕೊಳ್ಳುವುದು ಮತ್ತು 18 ವರ್ಷದ ಒಳಗಿನ ಮಕ್ಕಳಿಗೆ ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಅಪರಾಧ ಮಕ್ಕಳನ್ನು ದುಡಿಸಿಕೊಳ್ಳುವ ಅಂಗಡಿ ಮಾಲಿಕರಿಗೆ 20 ರಿಂದ 50 ಸಾವಿರ ದಂಡ 6 ರಿಂದ 2 ವರ್ಷ ಜೈಲು ಶಿಕ್ಷೆ ಖಚಿತ ಎಂದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿ ಸ್ವಾಮಿದಾಸ್, ಕಾರ್ಮಿಕ ನಿರೀಕ್ಷಕರಾದ ಪ್ರಶನ್ನ, ತಾಲೂಕು ವಕೀಲರ ಸಂಘದ ಅಧ್ಯಕ್ಷ ವಿಜಯಕುಮಾರ್ ಜಾಧವ, ಪಿಎಸ್ಐ ಉಪೇಂದ್ರಕುಮಾರ್, ಆರ, ಕೆ ಆಕಾಡೆಮಿ ಮುಖ್ಯಸ್ಥ ರಮೇಶ್ ಪಾಟೀಲ್, ರಾಹುಲ್ ಜಾಧವ, ರೋಹಿತ್ ಕಾಂಬಳೆ ಉಪಸ್ಥಿತರಿದ್ದರು.

# ಕಿಮ್ಸ್ ಆಸ್ಪತ್ರೆಗೆ ಸಾರ್ವಜನಿಕರಿಂದ ಪ್ರಶಂಸೆ ವ್ಯಕ್ತ




ಕಿಮ್ಸ್ ಆಸ್ಪತ್ರೆ ಉತ್ತರ ಕರ್ನಾಟಕದ ಅತೀ ದೊಡ್ಡ ಸರ್ಕಾರಿ ಆಸ್ಪತ್ರೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ನಿತ್ಯ ಹತ್ತಕ್ಕೂ ಹೆಚ್ಚು ಜಿಲ್ಲೆಗಳ ರೋಗಿಗಳ ಸಾವಿರಾರು ರೋಗಿಗಳು ಆಗಮಿಸುತ್ತಾರೆ. ಹೀಗೆ ಆಗಮಿಸುವ ರೋಗಿಗಳ ತಪಾಸಣೆ ತಲೆನೋವಾಗಿತ್ತು. ಆದ್ರೆ ಇದೀಗ ಎಕ್ಸರೇ, ಸ್ಕ್ಯಾನಿಂಗ್ ಹಾಗೂ ರಕ್ತ ತಪಾಸಣೆ ರಿಪೋರ್ಟ್ ಅನ್ನು ಆನ್‌ಲೈನ್‌ನಲ್ಲೇ ನೀಡುವ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾಗಿದೆ. ಕಿಮ್ಸ್‌ನಲ್ಲಿ ಎಲುಬು, ಕೀಲು, ಗರ್ಭಿಣಿಯರು, ಕ್ಯಾನ್ಸರ್ ಸೇರಿದಂತೆ ನಾನಾ ಕಾಯಿಲೆಗಳ ಕೂಲಂಕಷ ಪರೀಕ್ಷೆಗೆ ಎಕ್ಸರೇ, ಡಾಪ್ಲರ್, ಯುಎಸ್‌ಜಿ, ಸಿಟಿ, ಎಂಆರ್‌ಐ ಸ್ಕ್ಯಾನಿಂಗ್‌ಗಳ ಫಿಲ್ಮ್‌ಗಳು, ರಿಪೋರ್ಟ್ ಹಾಗೂ ರಕ್ತ ತಪಾಸಣೆ ವರದಿ ಪಡೆಯಲು ರೋಗಿಗಳು ಎಕ್ಸರೇ ಮತ್ತು ಲ್ಯಾಬ್ ವಿಭಾಗಕ್ಕೆ ಪದೇ ಪದೆ ಎಡತಾಕಬೇಕಿತ್ತು. ಆದ್ರೆ ಇದೀಗ ಎಲ್ಲವೂ ಸಂಬಂಧಿಸಿದ ವಿಭಾಗದ ವೈದ್ಯರಿಗೆ ಆನ್‌ಲೈನ್ ಮೂಲಕವೇ ದೊರೆಯುವ ವ್ಯವಸ್ಥೆ ಮಾಡಿದೆ. ಈ ವ್ಯವಸ್ಥೆ ಕಳೆದ ಕೆಲ ತಿಂಗಳಿನಿಂದ ಆರಂಭವಾಗಿದ್ದು, ಇದು ರೋಗಿಗಳಿಗೆ ಅನುಕೂಲವಾಗಿದೆ.

ನಿತ್ಯ ಸರಾಸರಿ 700–900 ಜನರು ಸ್ಕ್ಯಾನಿಂಗ್, ಎಕ್ಸರೇ ಪರೀಕ್ಷೆಗೆ ಒಳಪಡುತ್ತಾರೆ. ಆದಾದ ಬಳಿಕ ರೋಗಿಗಳು ಅವುಗಳ ವರದಿ ಮತ್ತು ಫಿಲ್ಮ್‌ಗಳಿಗಾಗಿ ಮಧ್ಯಾಹ್ನ, ಸಂಜೆ ವೇಳೆಗೆ ಅಲ್ಲಿಂದ ಇಲ್ಲಿಗೆ, ಇಲ್ಲಿಂದ ಅಲ್ಲಿಗೆ ಓಡಾಡಬೇಕಾಗುತ್ತಿತ್ತು. ಆನ್ ಲೈನ್ ವ್ಯವಸ್ಥೆ ಜಾರಿಯಿಂದ ಈ ಅಲೆದಾಟ ತಪ್ಪಿದೆ. ಇದೇ ಮೊದಲ ಬಾರಿಗೆ ಕಿಮ್ಸ್‌ನಲ್ಲಿ ರಕ್ತ ತಪಾಸಣೆ ವರದಿಯನ್ನೂ ಸಹ ಆನ್‌ಲೈನ್ ಗೊಳಪಡಿಸಲಾಗಿದೆ.

ತಾಂತ್ರಿಕ ಕಾರಣಗಳಿಂದ ಮುಂದೂಡಿಕೆಯಾಗಿತ್ತು. ಇದೀಗ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಪ್ಯಾಕ್ಸ್ ವ್ಯವಸ್ಥೆಯಿಂದ ಕಿಮ್ಸ್‌ಗೆ ಕಾಗದ ಮತ್ತು ಎಕ್ಸರೇ, ಸ್ಕ್ಯಾನಿಂಗ್ ಫಿಲ್ಮ್‌ಗೆ ತಗಲುತ್ತಿದ್ದ ವೆಚ್ಚ ಸೇರಿ 1 ಕೋಟಿ ರೂ. ಉಳಿತಾಯವಾಗಲಿದೆ. ಅಲ್ಲದೆ, ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣವಾಗುವ ಮೂಲಕ ಇತರೆ ಆಸ್ಪತ್ರೆಗಳಿಗೆ ಮಾದರಿಯಾಗಿದ್ದು, ಇದು ಬಡವರಿಗೆ ವರದಾನವಾಗಿದೆ ಎನ್ನುತ್ತಾರೆ ಸಾರ್ವಜನಿಕರು.

ಶಿವಾನಂದ ಮುತ್ತಣ್ಣನವರ್, ಸಾರ್ವಜನಿಕಟ್ಟಿನಲ್ಲಿ ಸರ್ಕಾರಿ ಆಸ್ಪತ್ರೆ ಎಂದು ಮೂಗು ಮುರಿಯುವವ ಮಧ್ಯೆ ಕಿಮ್ಸ್ ಆಸ್ಪತ್ರೆ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಮೂಲಕ ತುರ್ತು ಚಿಕಿತ್ಸೆ ನೀಡಲು ಸಹಾಯಕವಾಗಿದ್ದು, ಇದು ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾಗಿದೆ.

# ನೂತನ ಶಾಸಕ ಜಿ. ಹಂಪಯ್ಯ ನಾಯಕರಿಗೆ ಸನ್ಮಾನ

ಪೋತ್ನಾಳ: ಮಾನ್ವಿ ವಿಧಾನಸಭಾ ಕ್ಷೇತ್ರದ ನೂತನ ಶಾಸಕ ಜಿ. ಹಂಪಯ್ಯ ನಾಯಕಗೆ ದೇವಿಪುರ ಗ್ರಾಮಸ್ಥರು ಹೃದಯ ಸ್ಪರ್ಶಿ ಅಭಿಮಾನ ಪೂರ್ವಕವಾಗಿ ಸನ್ಮಾನಿಸಿ ಗೌರವಿಸಿದರು

ನಂತರ ಸನ್ಮಾನ ಸ್ವೀಕರಿಸಿ ನೂತನ ಶಾಸಕ ಜಿ. ಹಂಪಯ್ಯ ನಾಯಕ ಮಾತನಾಡಿ ಈ ಕ್ಷೇತ್ರದ ಜನರು ನನ್ನನ್ನು ಈ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲು ಪುನಃ ವಿಧಾನಸಭೆಗೆ ಆಯ್ಕೆ ಮಾಡಿ ಕಳುಹಿಸಿದ್ದೀರಿ. ನಿಮ್ಮ ಋಣ ಎಂದಿಗೂ ಮರೆಯಲಾರೆ.

ಗ್ರಾಮೀಣ ಜನರ ಮೂಲಭೂತ ಸೌಕರ್ಯ ಶಿಕ್ಷಣ. ಆರೋಗ್ಯ. ಸಿಸಿ ರಸ್ತೆ. ಒಳಚರಂಡಿ ವ್ಯವಸ್ಥೆ. ಕುಡಿಯುವ ನೀರು ಆಹಾರ ವಸತಿ ಸೇರಿದಂತೆ ಇನ್ನಿತರ ಹಲವಾರು ಸಮಸ್ಯೆಗಳಿಗೆ



ಪರಿಹಾರ ಒದಗಿಸುವ ಮೂಲಕ ಈ ರಾಜ್ಯದ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ತಂದು ಶ್ರಮಿಸುವುದಾಗಿ ಭರವಸೆ ನೀಡಿದರು

ಈ ಸಂದರ್ಭದಲ್ಲಿ ಊರಿನ ಮುಖಂಡರಾದ ಯಂಕೋಬ,ಅಯ್ಯಪ್ಪ ಪೆದರೆಡ್ಡಿ, ಈರಪ್ಪ ದಿದ್ದಿಗಿ, ಟಿ ಹನುಮಪ್ಪ,ಸಣ್ಣ ದ್ಯಾವಪ್ಪ, ಗ್ಯಾಂಗ್ ದ್ಯಾವಪ್ಪ, ನಿರುಪಾದೆಪ್ಪ ಇತರರು ಉಪಸ್ಥಿತರಿದ್ದರು

# ಅವಳಿ ಮಕ್ಕಳನ್ನು ಹತ್ಯೆಗೈದ ಬೆಳಗಾವಿ ಮೂಲದ ವ್ಯಕ್ತಿ ಬಂಧನ

ದಾವಣಗೆರೆ: ತಂದೆಯೇ ತನ್ನ ಅವಳಿ ಮಕ್ಕಳನ್ನು ಕಾರಿನಲ್ಲಿ ಕರೆದೊಯ್ದು ಅವರ ಮುಖಕ್ಕೆ ಟೆಕ್ಸೋ ಟೇಪ್ ಅಂಟಿಸಿ ಉಸಿರುಗಟ್ಟಿಸಿ ಕೊಲೆ ಮಾಡಿರುವ ಹೃದಯವಿದ್ರಾವಕ ಘಟನೆ ರಾಣೆಬೆನ್ನೂರು ತಾಲೂಕಿನ ಚಳಗೇರಿ ಟೋಲ್ ಗೇಟ್ ಬಳಿ ನಡೆದಿದೆ.

ಮೃತಪಟ್ಟ ಮಕ್ಕಳನ್ನು ಅದ್ವೈತ್ (4), ಅನ್ವಿತ್ (4)ನನ್ನು ತಂದೆ ಅಮರ್ ಕಿತ್ತೂರು ಪತ್ನಿ ವಿಜಯಪುರದಲ್ಲಿರುವ ತವರಿಗೆ ಹೋಗಿದ್ದ ಸಂದರ್ಭದಲ್ಲಿ ಮಕ್ಕಳನ್ನು ಕರೆದೊಯ್ದು ಕೊಲೆ ಮಾಡಿದ್ದಾರೆ. ಬೆಳಗಾವಿ ಜಿಲ್ಲೆ ಗೋಕಾಕ್ ಮೂಲದ ಅಮರ್ ಸದ್ಯ ದಾವಣಗೆರೆಯ ಆಂಜನೇಯ ಮಿಲ್ ಬಡಾವಣೆಯಲ್ಲಿ ವಾಸವಿದ್ದಾರೆ. ದಾವಣಗೆರೆ ಜಿಲ್ಲೆಯ ಹ–ರಿಹರ ಬಳಿ ಇರುವ ಕಾರ್ಗಿಲ್ ಫ್ಯಾಕ್ಟರಿಯಲ್ಲಿ ಕೆಮಿಕಲ್ ಇಂಜಿನಿಯರ್ ಆಗಿದ್ದಾರೆ. ಕೃತ್ಯ ಎಸಗಲು ಮಕ್ಕಳನ್ನು ಕೊರೆದೊಯ್ಯುವಾಗ ಅವರ ತಾಯಿ ಮನೆಯಲ್ಲೇ ಇದ್ದರು.

ಅಮರ್ ತನ್ನ ಮಕ್ಕಳನ್ನು ಕಾರಿನಲ್ಲಿ ಕರೆದುಕೊಂಡು ಹೋಗಿದ್ದಾಗ ಪತ್ನಿ ದೂರವಾಣಿ ಕರೆ ಮಾಡಿದ್ದರು. ಅದಕ್ಕೆ ಉತ್ತ–ರಿಸಿದ್ದ ಅಮರ್, ಮಕ್ಕಳ ಕಥೆ ಮುಗಿದಿದೆ ಎಂದಿದ್ದರು. ಇದರಿಂದ ಗಾಬರಿಗೊಂಡ ಪತ್ನಿ ತಕ್ಷಣವೇ ದಾವಣಗೆರೆ ಪೊಲೀಸ–ರಿಗೆ ಕರೆ ಮಾಡಿ ವಿಷಯ ತಿಳಿಸಿ ಆತಂಕ ವ್ಯಕ್ತಪಡಿಸಿದ್ದರು.

ಅಷ್ಟರಲ್ಲಾಗಲೇ ಅಮರ್ ತನ್ನ ಮೊಬೈಲ್ ಫೋನ್ ಅನ್ನು ಸ್ವಿಚ್ ಆಫ್ ಮಾಡಿಕೊಂಡಿದ್ದರು. ಸಿಮ್ ಕಾರ್ಡ್ ಟ್ರೇಸ್ ಮಾಡಿದ ಪೊಲೀಸರಿಗೆ ಅಮರ್ ಚಳಗೇರಿ ಟೋಲ್ ಬಳಿ ಇದ್ದ ಮಾಹಿತಿ ಲಭ್ಯವಾಗಿದೆ. ಅಲ್ಲಿಗೆ ತೆರಳಿದಾಗ ಆರೋಪಿಯು ದಾವಣಗೆರೆಗೆ ವಾಪಸಾಗಿರುವುದು ತಿಳಿಯುತ್ತದೆ. ನಂತರ ದಾವಣಗೆರೆಗೆ ಬಂದ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

ಕೊಲೆ ಮಾಡಿದ ನಂತರ ಮಕ್ಕಳ ಶವಗಳನ್ನು ಅಮರ್ ಕಾರಿನಲ್ಲಿಯೇ ತಂದಿದ್ದರು. ಪೊಲೀಸರ ತನಿಖೆ ವೇಳೆ, ತಾನೇ ಕೊಲೆ ಮಾಡಿದ್ದಾಗಿ ಆರೋಪಿ ತಪ್ಪೊಪ್ಪಿಕೊಂಡಿದ್ದಾರೆ. ಘಟನೆ ಸಂಬಂಧ ದಾವಣಗೆರೆಯ ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

# ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿಯ ಲಕ್ಷ್ಮೀ ನಗರ, ವಡಗಾವಿ ಸಾ. ಸಿಸಿಬಿ ನಂ.8826, 4 ನೇ ಕ್ರಾಸ್ ಇಲ್ಲಿಯ ನಿವಾಸಿಯಾದ ವಿಜಯ ಮಹಾಬಳೇಶ್ವರ ಕಾಂಬಳೆ(36) ಇವರು ಮೇ.28 2023 ರಂದು 11 ಗಂಟೆಗೆ ಕೆಲಸಕ್ಕೆ ಹೋಗುತ್ತೇನೆ ಎಂದು ಮನೆಯಿಂದ ಹೋದವರು ಮರಳಿ ಮನೆ ಬಂದಿಲ್ಲ ಎಂದು ಇವರ ತಂದೆ ಶಹಾಪೂರ ಪೋಲಿಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ ಪಟ್ಟಿ: ಎತ್ತರ 5 ಫೂಟ್ 1 ಇಂಚು, ದುಂಡು ಮುಖ, ಸದೃಢ ಮೈಕಟ್ಟು, ಸಾದಾ ಕಪ್ಪು ಮೈಬಣ್ಣವಿದ್ದು, ಬೂದು ಬಣ್ಣದ ಫುಲ್ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ ಮತ್ತು ಕನ್ನಡ ಭಾಷೆ ಮಾತನಾಡುತ್ತಾರೆ.

ಸದರಿ ಯುವಕನ ಬಗ್ಗೆ ಮಾಹಿತಿ ದೊರೆತಲ್ಲಿ ಪೋಲಿಸ್ ಆಯುಕ್ತರು ಅಥವಾ ಪೋಲಿಸ್ ಇನ್ಸಪೆಕ್ಟರ್, ಶಹಾಪೂರ ಪೋಲಿಸ್ ಠಾಣೆ ಬೆಳಗಾವಿ ಹಾಗೂ ದೂರವಾಣಿ ಸಂಖ್ಯೆ 0831–2405233, 0831–2405244, 9480804046 ಗೆ ಸಂಪರ್ಕಿಸಬಹುದು ಎಂದು ಶಹಾಪೂರ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089